EMAIL : dairyadadaari@gmail.com ಸಂಪುಟ: 01 ಸಂಚಿಕೆ: 19

ಬೆಲೆ ರೂ : 2.00

ರಾಯಚೂರು

ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಬುಧವಾರ: 24–12–2025

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

## ಅಧಿಕಾರ ಹಂಚಿಕೆ ಒಪ್ಪಂದವಾಗಿದೆ, ಸಿದ್ದರಾಮಯ್ಯನವರು ಅದರಂತೆ ನಡೆದುಕೊಳ್ಳಬೇಕು : ಡಿಕೆಶಿ ಬಣದ ಸ್ಫೋಟಕ ಹೇಳಿಕೆ

**ಬೆಂಗಳೂರು, ಡಿ.23–** ಕಾಂಗ್ರೆಸ್ ಪಕ್ಷದಲ್ಲಿ ಸಮಸ್ಯೆಗಳೇ ಇಲ್ಲ. ಇನ್ನು ಬಗೆಹರಿಸಿಕೊಳ್ಳುವುದು ಯಾವುದನ್ನು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಶ್ನಿಸಿ ದೆಹಲಿಗೆ ವಿಮಾನ ಏರಿದ ಬೆನ್ನಲ್ಲೆ, ಅಧಿಕಾರ ಹಂಚಿಕೆಯ ಒಪ್ಪಂದ ಆಗಿದೆ. ಅದರಂತೆ ಸಿದ್ದರಾಮಯ್ಯ ನಡೆದುಕೊಳ್ಳಬೇಕು ಎಂಬ ಒತ್ತಾಯವನ್ನು ಡಿ.ಕೆ. ಬಣದ ಶಾಸಕರು ಮುಂದಿಟ್ಟಿದ್ದಾರೆ.

ಕೇಂದ್ರ ಸಚಿವರ ಹಾಗೂ ಪಕ್ಷದ ಹೈಕಮಾಂಡ್ ನಾಯಕರ ಭೇಟಿಗಾಗಿ ಡಿ.ಕೆ.ಶಿವಕುಮಾರ್ ಇಂದು ಬೆಳಿಗ್ಗೆ ದೆಹಲಿಗೆ ತೆರಳಿದ್ದಾರೆ. ಎರಡು ದಿನಗಳವರೆಗೂ ಅವರು ದೆಹಲಿಯಲ್ಲೆ ಠಿಕಾಣಿ ಹೂಡಲಿದ್ದಾರೆ. ಈ ನಡುವೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ, ಪವನ್ ಖೇರಾ, ಜೈರಾಮ್ ರಮೇಶ್ ಮತ್ತು ಸೋನಿಯಾ ಗಾಂಧಿ ಅವರ ಆಪ್ತರಾದ ಅಂಬಿಕಾ ಸೋನಿ ಅವರನ್ನು ಭೇಟಿ ಮಾಡುವ ಸಾಧ್ಯತೆ ಇದೆ. ಉಪಮುಖ್ಯಮಂತ್ರಿಯವರ ದೆಹಲಿ



ಪ್ರವಾಸದ ಬೆನ್ನಲ್ಲೆ ಡಿ.ಕೆ.ಶಿವಕುಮಾರ್ ಆಪ್ತರು ಅಧಿಕಾರ ಹಂಚಿಕೆಯ ಒಪ್ಪಂದ ಆಗಿದೆ. ಅದರಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಡೆದುಕೊಳ್ಳಬೇಕು ಎಂದು ನೇರವಾಗಿ ಹೇಳುವ ಮೂಲಕ ಸಂಘರ್ಷವನ್ನು ಮತ್ತೊಂದು ಹಾದಿಗೆ ತೆಗೆದುಕೊಂಡು ಹೋಗುವ ಪ್ರಯತ್ನ ಮಾಡಿದ್ದಾರೆ.

ಬೆಳಗಾವಿಯ ವಿಧಾನಮಂಡಲದ ಅಧಿವೇಶನದಲ್ಲಿ ಮಾತನಾಡಿದ್ದ ಸಿದ್ದರಾಮಯ್ಯ, ಮುಖ್ಯಮಂತ್ರಿ ಹುದ್ದೆಯ ಬಗ್ಗೆ ಯಾವುದೇ ಒಪ್ಪಂದ ಆಗಿಲ್ಲ ಎಂದಿದ್ದರು. ಇದಕ್ಕೂ ಮೊದಲು ಕಳೆದ ತಿಂಗಳು ಡಿ.ಕೆ.ಶಿವಕುಮಾರ್ ರಾಮನಗರದಲ್ಲಿ ಮಾತನಾಡುವ ವೇಳೆಯಲ್ಲಿ ದೆಹಲಿಯಲ್ಲಿ ಐದಾರು ಮಂದಿಯ ನಡುವೆ ನಡೆದಿರುವ ವ್ಯಾಪಾರವನ್ನು ಬಹಿರಂಗ ಪಡಿಸಲು ತಾವು ಇಚ್ಛಿಸುವುದಿಲ್ಲ ಎಂದು ಹೇಳಿ ಅಡ್ಡಗೋಡೆಯ ಮೇಲೆ ದೀಪ ಇಟ್ಟಿದ್ದರು.

ಯಾವುದೇ ಒಪ್ಪಂದ ಆಗಿಲ್ಲ ಎಂದು ಸಿದ್ದರಾಮಯ್ಯ ವಿಧಾನಸಭೆಯಲ್ಲಿ ಹೇಳುವುದಕ್ಕೂ, ಅದಾದ ಎರಡು ದಿನಗಳ ಬಳಿಕ ಕಲ್ಬುರ್ಗಿಯಲ್ಲಿ ಮಲ್ಲಿಕಾರ್ಜುನ ಖರ್ಗೆಯವರು, ನಾಯಕತ್ವದ ಗೊಂದಲಗಳನ್ನು ಸೃಷ್ಟಿ ಮಾಡಿರುವುದು ರಾಜ್ಯದ ನಾಯಕರು. ಅದನ್ನು ಸ್ಥಳೀಯವಾಗಿಯೇ ಬಗೆಹರಿಸಿಕೊಳ್ಳಬೇಕು ಎನ್ನುವುದಕ್ಕೂ ತಾಳಮೇಳ ಹೊಂದಾಣಿಕೆಯಾಗಿತ್ತು.

ಈ ಹೇಳಿಕೆ ಆಂತರಿಕವಾಗಿ ಸಿದ್ದರಾಮಯ್ಯ ಅವರ ಕೈ ಬಲಪಡಿಸಿದೆ. ಮುಖ್ಯಮಂತ್ರಿ ಹುದ್ದೆ ಆಭಾದಿತ ಎಂಬ ಭರವಸೆಯ ಮೇಲೆ ಸಿದ್ದರಾಮಯ್ಯ ಅವರ ಬಣ ಸಂಭ್ರಮಾ ಚರಣೆ ಮಾಡುತ್ತಿದೆ. ಈ ಹೊತ್ತಿನಲ್ಲೇ ಡಿ.ಕೆ. ಶಿವಕುಮಾರ್ ಅವರ ಪರಮಾಪ್ತರಾಗಿರುವ ಕುಣಿಗಲ್ 2ನೇಪುಟಕ್ಕೆ►

## ಸರ್ಕಾರಿ ಅಧಿಕಾರಿಗಳಿಗೆ ಲೋಕಾಯುಕ್ತ ಶಾಕ್, ರಾಜ್ಯದ ಹಲವೆಡೆ ಮನೆ–ಕಚೇರಿಗಳ ಮೇಲೆ ಏಕಕಾಲಕ್ಕೆ ದಾಳಿ




**ಬೆಂಗಳೂರು, ಡಿ. 23:** ಬಾಗಲಕೋಟೆ, ವಿಜಯಪುರ, ಉತ್ತರ ಕನ್ನಡ ಮತ್ತು ರಾಯಚೂರು ಸೇರಿದಂತೆ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಇಂದು ಬೆಳ್ಳಂಬೆಳಿಗ್ಗೆ ಸರ್ಕಾರಿ ಅಧಿಕಾರಿಗಳ ಮನೆಗಳು ಹಾಗೂ ಕಚೇರಿಗಳ ಮೇಲೆ ಏಕಕಾಲದಲ್ಲಿ ದಾಳಿ ನಡೆಸಿ ಶಾಕ್ ನೀಡಿದ್ದಾರೆ. ದಾಳಿಯ ಮೇಲೆ ಅಪಾರ ಪ್ರಮಾಣದ ಆಸ್ತಿಪಾಸ್ತಿ ಪತ್ತೆಯಾಗಿದೆ.

ಹಲವು ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರದ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದೆ. ಭ್ರಷ್ಟ ಅಧಿಕಾರಿಗಳ ಬಂಗಲೆಗಳು, ಮನೆಗಳು ಮತ್ತು ಕಚೇರಿಗಳಲ್ಲಿ ಶೋಧ ಕಾರ್ಯ ನಡೆಯುತ್ತಿದೆ. ಬಾಗಲಕೋಟೆ ಜಿಲ್ಲೆ ಜಿ.ಪಂ. ಯೋಜನಾ ನಿರ್ದೇಶಕರು ಹಾಗೂ ಅಧಿಕಾರಿ ಆಗಿರುವ ಶ್ಯಾಂ ಸುಂದರ್ ಕಾಂಬಳೆ ಅವರ ಬಾಗಲಕೋಟೆ ಮತ್ತು ಗದಗ ಜಿಲ್ಲೆಯ ನರಗುಂದದ ಮನೆಗಳ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಲಾಗಿದೆ. ಇದೇ ಜಿಲ್ಲೆಯ ಬಾಗೇವಾಡಿಯ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಲ್ಲಪ್ಪ ಅವರ ಮನೆಯ ಮೇಲೆಯೂ ಲೋಕಾಯುಕ್ತರು ದಾಳಿ ನಡೆಸಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರದಲ್ಲಿ ಮುಖ್ಯಾಕಾರ್ಯ ನಿರ್ವಹಣಾ ಅಧಿಕಾರಿ ಮಾರುತಿ ಯಶವಂತ ಮಾಳವಿ ಅವರ ನಿವಾಸದ ಮೇಲೆ ದಾಳಿ ನಡೆಸಿ ದಾಖಲೆಗಳನ್ನು ಜಾಲಾಡಿದ್ದಾರೆ. ರಾಯಚೂರು ಜಿಲ್ಲೆಯ ಸಿಂಧನೂರು ಉಪ ವಿಭಾಗದ ಗ್ರಾಮೀಣ ಕುಡಿಯುವ ಸರಬರಾಜು ಇಲಾಖೆಯ ಎಇಇ ಡಿ.ವಿಜಯಲಕ್ಷ್ಮಿ ಮನೆ ಸೇರಿದಂತೆ ಐದು ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದನೆ ದೂರಿನ ಮೇರೆಗೆ ದಾಳಿ ಮಾಡಲಾಗಿದೆ. ನಗರದ ಐಡಿಎಸ್‌ಂಟಿ ಲೇಔಟ್ ನ ನಾಲ್ಕಂತಸ್ತಿನ ಮನೆ ಮತ್ತು ಪಕ್ಕದಲ್ಲೆ ಇರುವ ಇನ್ನೊಂದು ಮನೆಯಲ್ಲಿ ದಾಖಲೆಗಳ 2ನೇಪುಟಕ್ಕೆ►


## ಸರ್ಕಾರಿ ಬಾಲಮಂದಿರ, ದತ್ತು ಸ್ವೀಕಾರ ಕೇಂದ್ರ ವಿವಿಧೆಡೆ ಜಿಲ್ಲಾಧಿಕಾರಿಗಳಿಂದ ದಿಢೀರ್ ಭೇಟಿ; ಪರಿಶೀಲನೆ

ಧೈರ್ಯದ ದಾರಿ

**ರಾಯಚೂರು,ಡಿ.23:**ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಡಿಸೆಂಬರ್ 22ರಂದು ನಗರದ ಸರ್ಕಾರಿ ದತ್ತು ಸ್ವೀಕಾರ ಕೇಂದ್ರ, ಸರ್ಕಾರಿ ವೀಕ್ಷಣಾಲಯ, ಸರ್ಕಾರಿ ಬಾಲಕಿಯರ ಬಾಲಮಂದಿರ ಹಾಗೂ ಬಾಲಕರ ಬಾಲ ಮಂದಿರ ಸೇರಿದಂತೆ ವಿವಿಧೆಡೆ ದಿಢೀರ್ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯನ್ನು ಖುದ್ದು ಪರಿಶೀಲಿಸಿದರು.

ಮೊದಲಿಗೆ ನಗರದ ಸರ್ಕಾರಿ ದತ್ತು ಸ್ವೀಕಾರ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಸಂಸ್ಥೆಯಲ್ಲಿನ ಮಕ್ಕಳ ಸುರಕ್ಷತೆ, ಆರೋಗ್ಯ ಮತ್ತು ಮೂಲಭೂತ ಸೌಲಭ್ಯಗಳ ಕುರಿತು ಪರಿಶೀಲಿಸಿದರು. ಸಂಸ್ಥೆಯಲ್ಲಿನ ಮಕ್ಕಳಿಗೆ ಕಾಲಕಾಲಕ್ಕೆ ಲಸಿಕೆ ಹಾಕಿಸಬೇಕು. ಗುಣಮಟ್ಟದ ಆಹಾರ ವಿತರಣೆ ಮಾಡಬೇಕು. ಮಕ್ಕಳ ಸುರಕ್ಷತೆ ಬಗ್ಗೆ ಜಾಗೃತೆ ವಹಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನಂತರ ಸರ್ಕಾರಿ ವೀಕ್ಷಣಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಅಡುಗೆ ಮನೆ, ಮಕ್ಕಳ ವಾಸದ ಕೋಣೆ, ಶೌಚಗೃಹಗಳನ್ನು ವೀಕ್ಷಿಸಿ ಶುಚಿತ್ವ ಮತ್ತು ಮೂಲಭೂತ ಸೌಕರ್ಯದ ಬಗ್ಗೆ ಗಮನ




ಹರಿಸಲು ಸೂಚನೆಗಳನ್ನು ನೀಡಿದರು. ಇದೆ ವೇಳೆ, ಜಿಲ್ಲಾಧಿಕಾರಿಗಳು, ಕಾನೂನು ಸಂಘರ್ಷಕ್ಕೆ ಒಳಗಾದ ಬಾಲಕರೊಂದಿಗೆ ಆಪ್ತವಾಗಿ ಮಾತನಾಡಿದರು. ಇಲ್ಲಿಂದ ಬಿಡುಗಡೆ ಆದ ಮೇಲೆ ಉತ್ತಮ ಜೀವನ ರೂಪಿಸಿಕೊಳ್ಳಬೇಕು. ಮುಂದೆ ಯಾವತ್ತೂ ತಪ್ಪು ಮಾಡಬಾರದು ಎಂದು ಸಲಹೆ ಮಾಡಿದರು.

ನಂತರ ಬಾಲಕಿಯರ ಬಾಲ ಮಂದಿರ ಮತ್ತು ಬಾಲಕರ ಬಾಲ ಮಂದಿರಗಳಿಗೆ ಭೇಟಿ ನೀಡಿ, ಅಲ್ಲಿನ ಮಕ್ಕಳೊಂದಿಗೆ ಸಮಾಲೋಚನೆ ನಡೆಸಿದರು. ಅಲ್ಲಿನ ಆಹಾರ ಸಾಮಗ್ರಿಗಳ ಗುಣಮಟ್ಟದ ಬಗ್ಗೆ ಪರಿಶೀಲನೆ ಮಾಡಿದರು. ಮಕ್ಕಳ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಸಂಸ್ಥೆಯ ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡರು.

ನಂತರ, ಶಿಶುಕೇಂದ್ರಿತ ಯೋಜನೆಯಡಿ ಅನುದಾನ ಸಂಹಿತೆಗೆ ಒಳಪಟ್ಟ ವಿಶ್ವಧರ್ಮ ಮಹಿಳಾ ಮತ್ತು ಮಕ್ಕಳ ಶಿಕ್ಷಣ ಸೇವಾ ಸಮಿತಿ ಇವರಿಂದ ನಿರ್ವಹಣೆ ಮಾಡಲಾಗುತ್ತಿರುವ ನಗರದ ನಿಜಲಿಂಗಪ್ಪ ಕಾಲೋನಿಯಲ್ಲಿನ ವಿಶ್ವಧರ್ಮ ಬುದ್ಧಿಮಾಂದ್ಯ ಮಕ್ಕಳ ವಿಶೇಷ ಶಾಲೆಗೆ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗಕರಿಕರ ಸಬಲೀಕರಣ ಇಲಾಖೆಯ ಸಹಯೋಗದಲ್ಲಿ ಆಶಾದೀಪ ಟ್ರಸ್ಟ್ ನಿರ್ವಹಣೆ ಮಾಡುತ್ತಿರುವ ಪಬ್ಲಿಕ್ ಗಾರ್ಡನ್ ಹತ್ತಿರದಲ್ಲಿನ ಆಶಾದೀಪ ವಿಶೇಷ ಮಕ್ಕಳ ಶಾಲೆಗೆ ಭೇಟಿ ನೀಡಿ ಪರಿಶೀಲಿಸಿದರು. ಅಲ್ಲಿನ ಮೂಲಭೂತ ಸೌಕರ್ಯಗಳ ಬೇಡಿಕೆಗಳ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ನಿರೂಪಣಾಧಿಕಾರಿ ಕುಮಾರ್, ಜಿಲ್ಲಾ ವಿಕಲಚೇತನರ ಕಲ್ಯಾಣ ಅಧಿಕಾರಿ ಶ್ರೀದೇವಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಕಿರಿಲಿಂಗಪ್ಪ, ರಮೇಶ ಹಾಗೂ ಸಂಸ್ಥೆಯ ಅಧೀಕ್ಷಕರು ಇದ್ದರು.

## ಕವಿತಾಳ :ಪ.ಪಂ.ರಾಜೇಶ್ವರಿ ತಿಪ್ಪಯ್ಯಸ್ವಾಮಿ ಅಧ್ಯಕ್ಷೆಯಾಗಿ ಅವಿರೋದ ಆಯ್ಕೆ. ಜನರ ಸಮಸ್ಯೆ ಆಲಿಸಬೇಕು – ಶಾಸಕ ಜಿ.ಹಂಪಯ್ಯ ನಾಯಕ



ಧೈರ್ಯದ ದಾರಿ

**ಕವಿತಾಳ : ಡಿ.22–**ಪಟ್ಟಣ ಪಂಚಾಯತಿಯ ನೂತನ ಅಧ್ಯಕ್ಷೆಯಾಗಿ 14 ವಾರ್ಡನ್ ಶ್ರೀಮತಿ ರಾಜೇಶ್ವರಿ ತಿಪ್ಪಯ್ಯಸ್ವಾಮಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾ ಅಧಿಕಾರಿಯಾಗಿ ಆಗಮಿಸಿದ ಸಿರವಾರ ತಹಶಿಲ್ದಾರ ಅಶೋಕ ಪವಾರ್ ಹೇಳಿದರು .

ಕಾರಣಾಂತರಗಳಿಂದ ಖಾಸೀಂ ಬಿ ಚಾಂದಪಾಷಾ ಇವರು ರಾಜಿನಾಮೆ ಸಿಲ್ಲಿಸಿದ ಕಾರಣಕ್ಕೆ ಹೊಸ ಅದ್ಯಕ್ಷ ರ ಆಯ್ಕೆ ಪ್ರಕ್ರಿಯೆ ನಡೆಯಿತು .ಒಟ್ಟು 16 ಜನ ಸದಸ್ಯ ಪೈಕಿ ರಾಜೇಶ್ವರಿ ತಿಪ್ಪಯ್ಯ ಸ್ವಾಮಿ ಒಬ್ಬರೆ ನಾಮ ಪತ್ರ ಸಲ್ಲಿಸಿದ್ದು 16 ಜನ ಸಂಖ್ಯಾ ಬಲದ ಸದಸ್ಯರ ಪೈಕಿ 11 ಜನ ಉಪಸ್ಥಿತರಿದ್ದು ಶಾಸಕರು ಒಂದು ಮತ ಚಲಾಯಿಸಿರುವರು , ನಿಗದಿತ ಸಮಯದ ಒಳಗೆ ಇತರೆ ಯಾವುದೇ ನಾಮ ಪತ್ರ ಸಲ್ಲಿಕೆಯಾಗಿರುವುದಿಲ್ಲ , ಮತ್ತು ಯಾವುದೇ ನಾಮಪತ್ರ ಹಿಂಪಡೆದಿರುದಿಲ್ಲ , ಆಯ್ಕೆಗೆ ಬೇಕಾದ ಕೋರಂ ಸಂಖ್ಯಾಬಲ ಇದ್ದ ಕಾರಣ ರಾಜೇಶ್ವರಿ ತಿಪ್ಪಯ್ಯಸ್ವಾಮಿಯವರನ್ನು ಅವಿರೋಧವಾಗಿ ಆಯ್ಕೆಮಾಡಲಾಗಿದೆ ಎಂದು ಸಿರವಾರ ತಹಶಿಲ್ದಾರ ಅಶೋಕ ಪವಾರ್ ಘೋಷಣೆ ಮಾಡಿದರು .

ಕಾಂಗ್ರೆಸ್ ಕಾರ್ಯಕರ್ತರು ಬೆಂಬಲಿಗರು ಪಟಾಕಿ ಹಚ್ಚಿ ಗುಲಾಲು ಎರಚಿಕೊಂಡು ಸಂಭ್ರಮಿಸಿದರು.ಶಾಸಕ ಜಿ.ಹಂಪಯ್ಯ ನಾಯಕ ಮಾತನಾಡಿ ಕಾಂಗ್ರೆಸ್ ಯಾವತ್ತಿದ್ದರು ಬಡವರು , ದಿನ ದಲಿತರು , ಶ್ರಮೀಕರ ಪಕ್ಷ , ಕವಿತಾಳ ಒಂದು ದೊಡ್ಡ ಪಟ್ಟಣ ಇಂತಹ ಒಂದು ಪಟ್ಟಣ ಪಂಚಾಯಿತಿಯ ಅಧ್ಯಕ್ಷೆಯಾಗಿ ಆಯ್ಕೆಯಾದ ರಾಜೇಶ್ವರಿಯವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು . ಮೂಲಭೂತ ಸೌಕರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಿ ಎಲ್ಲರೋಂದಿಗೆ ಬೆರೆತು ಅಧಿಕಾರ ನಿಭಾಯಿಸಬೇಕದು ಸಲಹೆ ನೀಡಿದರು .

ಈ ಸಂದರ್ಭದಲ್ಲಿ ಮಾ.ಜಿ.ಪಂ.ಸದಸ್ಯ ಕಿರಿಲಿಂಗಪ್ಪ .ಮಾ.ತಾ.ಪಂ.ಸದಸ್ಯ ಮಾಳಪ್ಪ ತೋಳ , ಮಾಜಿ.ಅಧ್ಯಕ್ಷೆ ಖಾಸೀಂ ಬಿ ಚಾಂದಪಾಷಾ , ಉಪಾಧ್ಯಕ್ಷೆ ಎಲೀಜಾ ಓನಪ್ಪ , ಸದಸ್ಯರಾದ ರಮಾದೇವಿ , ಮಲ್ಲಿಕಾರ್ಜುನ ಗೌಡ ,ಹುಲುಗಪ್ಪ , ಅಮರೇಶ ಕಟ್ಟಿಮನಿ , ರಮೇಶ ನಗನೂರು , ಮುಖಂಡರಾದ ರಾ.ವಾ.ವಿ.ವಿದ್ಯಾಲಯದ ಸಿಂಡಿಕೇಟ್ ಸದಸ್ಯ ಶಿವಣ್ಣ ವಕೀಲ್ ಶೇಖರಪ್ಪ ಸಾಹುಕಾರ್ ಹಟ್ಟಿ , ಚನ್ನರೆಡ್ಡಿ ಸಾಹುಕಾರ್ ಬಾವಿಕಟ್ಟಿ , ಶಿವರಾಜ ಭೋವಿ , ಹನುಮಂತ ಅರಕೇರಿ ಇದ್ದರು.

## ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜಾನೆಕಲ್ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ದಲಿತಪರ ಸಂಘಟನೆಗಳಿಂದ ಪ್ರತಿಭಟನೆ



**ಮಾನ್ವಿ,ಡಿ.23–** ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ತಾಲೂಕಿನ ಜಾನೆಕಲ್ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು ಹಾಗೂ ವಿವಿಧ ದಲಿತಪರ ಸಂಘಟನೆಗಳಿಂದ ನಡೆದ ಪ್ರತಿಭಟನೆ ಧರಣಿಯಲ್ಲಿ ಗವಿಗಟ್ಟ ಗ್ರಾ.ಪಂ.ಸದಸ್ಯ ದೇವೇಂದ್ರಪ್ಪ ಮಾತನಾಡಿ ಜಾನೆಕಲ್ ಗ್ರಾಮಪಂಚಾಯಿತಿಯಲ್ಲಿ 15 ನೇ ಹಣಕಾಸು ಯೋಜನೆಯ ಅನು ದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ಪರಿಶೀಲನೆ ನಡೆಸಬೇಕು, ಗ್ರಾ.ಪಂ. ವತಿಯಿಂದ ಸಂಗ್ರಹಿಸಲಾದ ತೆರಿಗೆ ಹಣದ ಮಾಹಿತಿ ನೀಡಬೇಕು,ಬಸವ ವಸತಿ,ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳನ್ನು ಗ್ರಾಮ ಸಭೆ ಮೂಲಕ ಹಂಚಿಕೆ ಮಾಡಬೇಕು, ಈ ಸ್ವತ್ತು ಯೋಜನೆಯಡಿಯಲ್ಲಿ ಆಸ್ತಿ ಮಾಲಿಕರಿಗೆ ಖಾತಾ ಉತಾರ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ವಿನಾಕರಣ ವಿಳಂಬ ಮಾಡುವ ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ,ಗವಿಗಟ್ಟ ಗ್ರಾಮದಲ್ಲಿ ಶಕ್ತಿ ಭವನ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು,ಹಾಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು, ಗ್ರಾಮದ ಶಾಲೆಯಲ್ಲಿ ಕೈಗೊಳ್ಳಲಾದ ಮಳೆನೀರು ಕೋಯ್ಲು ಕಾಮಗಾರಿ, ಮರಂ ರಸ್ತೆ ಕಾಮಗಾರಿಯ ಬಾಕಿ ಇರುವ ಬಿಲ್ ಪಾವತಿ ಮಾಡಬೇಕು,ನರೇಗಾ ಕೂಲಿ ಕಾರ್ಮಿಕರಿಗೆ ಸಮರ್ಪಕವಾಗಿ ಕೂಲಿ ಕೆಲಸವನ್ನು ನೀಡದೆ ಇರುವ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಯ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು. ಎಂದು ಒತ್ತಾಯಿಸಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಜೆ.ರಮೇಶ ನಾಯಕ ಗವಿಗಟ್ಟ , ದಲಿತ ಸೇನೆ ತಾ.ಅಧ್ಯಕ್ಷರಾದ ರಮೇಶ ಕರೆಗುಡ್ಡ,ಗೌ.ಅಧ್ಯಕ್ಷರಾದ ಕರಿಯಪ್ಪ ನಕ್ಕುಂದಿ, ಭೀಮರಾಯ, ಮುತ್ತಣ್ಣ, ಹುಸೇನಪ್ಪ,ಮಾರೇಶ, ಬಿ.ಅಮರೇಶನಾಯಕ,ಮಾರೇಶ ಬಂಡಾರಿ, ಬಡಕಪ್ಪ,ನಾಗರಾಜ, ಶಾಂತ ಕುಮಾರ, ಚನ್ನಪ್ಪ ಗೌಡ, ಮೌನೇಶ, ಮರಿಸ್ವಾಮಿ,ಸುಧಾಕರ ಅರೋಲಿ, ಸೇರಿದಂತೆ ಇನ್ನಿತರರು ಇದ್ದರು.

## ಅದ್ದೂರಿಯಾಗಿ ಜರುಗಿದ ಅಯ್ಯಪ್ಪ ಸ್ವಾಮಿ ಮಂಡಲ ಪೂಜೆ ಹಾಗೂ ಭಾವಚಿತ್ರ ಮೇರವಣಿಗೆ

ಧೈರ್ಯದ ದಾರಿ

**ಲಿಂಗಸಗೂರು : ಡಿ 23–** , ಪಟ್ಟಣದ ಅಯ್ಯಪ್ಪಸ್ವಾಮಿ ದೇವಸ್ಥಾನದ 9 ನೇ ವಾರ್ಷಿಕೋತ್ಸವ ಹಾಗೂ ಮಂಡಲ ಪೂಜೆ ನಿಮತ್ಯ ಮಾಲಾಧಾರಿಗಳು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಅಯ್ಯಪ್ಪಸ್ವಾಮಿ ಉತ್ಸವ ಮೂರ್ತಿ ಮತ್ತು ಭಾವಚಿತ್ರದ ಭವ್ಯ ಮೆರವಣಿಗೆ ನಡೆಸಿದರು.

ಸುಪ್ರಭಾತದೊಂದಿಗೆ ಆರಂಭಗೊಂಡ ಪೂಜಾ ಕೈಂಕರ್ಯಗಳು ನೈರ್ಮಲ್ಯ ದರ್ಶನಂ, ಮಹಾಗಣಪತಿ ಹೋಮ,ಅಯ್ಯಪ್ಪಸ್ವಾಮಿ ಮೂರ್ತಿ ಸೇರಿದಂತೆ ದೇವಸ್ಥಾನದ 2ನೇಪುಟಕ್ಕೆ►



## ಮಾನವಿ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ನೂತನ ಅಧ್ಯಕ್ಷರಾಗಿ ರಾಜಾ ಸುಭಾಷ ಚಂದ್ರ ನಾಯಕ ಆಯ್ಕೆ

ಧೈರ್ಯದ ದಾರಿ

**ಮಾನ್ವಿ,ಡಿ.23–** ನಗರದ ಧ್ಯಾನ ಮಂದಿರದಲ್ಲಿ ಮಾನ್ವಿ ತಾಲೂಕ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ಗೌರವಾಧ್ಯಕ್ಷರಾಗಿ ಕಲ್ಮಠದ ವಿರೂಪಾಕ್ಷ ಮಹಾಸ್ವಾಮಿಗಳು, ಅಧ್ಯಕ್ಷರಾಗಿ ರಾಜಾ ಸುಭಾಷ್ ಚಂದ್ರ ನಾಯಕ, ಪ್ರಧಾನ ಕಾರ್ಯದರ್ಶಿ ಯಾಗಿ ರಾಜು ತಾಳಿಕೋಟಿ, ಸಹ ಕಾರ್ಯದರ್ಶಿ ಯಾಗಿ ಅಖಿಲೇಶ್ ಕುರ್ಡಿ, ಖಜಾಂಚಿ ಯಾಗಿ ಶರಣಬಸವ, ಉಪಾಧ್ಯಕ್ಷರಾಗಿ ಭೀಮರಾಯ ಸಿತಿಮನಿ, ಶಶಿಕಲಾ ಪಾಟೀಲ್, ಎಂ.ಎ.ಎಚ್. ಮುಖಿಮ್, ಸಂಘಟನಾ ಕಾರ್ಯದರ್ಶಿ ಯಾಗಿ ಸಂದೀಪ್ ಅವರನ್ನು ನೇಮಕ ಮಾಡಲಾಯಿತು.



# ಸುಪ್ರೀಂ ರದ್ದಿನ ನಂತರವೂ ಬಿಜೆಪಿಗೆ ದೇಣಿಗೆ ಮಹಾಪೂರ



**ನವದೆಹಲಿ, ಡಿ.23–** ಕಳೆದ ವರ್ಷ ಫೆಬ್ರವರಿಯಲ್ಲಿ ಚುನಾವಣಾ ಬಾಂಡ್‌ಗಳನ್ನು ಸುಪ್ರೀಂಕೋರ್ಟ್ ರದ್ದುಪಡಿಸಿದ ನಂತರ ಬಿಜೆಪಿಯ ಬೊಕ್ಕಸದ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಬದಲು, 2024–25 ರಲ್ಲಿ ಅದರ ದೇಣಿಗೆ ಸಂಗ್ರಹಕ್ಕಿಂತ ಹೆಚ್ಚಾಗಿದೆ. ಚುನಾವಣಾ ಬಾಂಡ್ ಇಲ್ಲದಿದ್ದರೂ ಬಿಜೆಪಿಗೆ 3,577 ಕೋಟಿ ರೂಪಾಯಿ ದೇಣಿಗೆ ಹರಿದುಬಂದಿದೆ.

2023–24ರಲ್ಲಿ, ಸ್ವಯಂಪ್ರೇರಿತ ದೇಣಿಗೆಗಳ ಮೂಲಕ ಬಿಜೆಪಿಯ ಒಟ್ಟು ಸ್ವೀಕೃತಿಗಳು 3,967 ಕೋಟಿ ರೂಪಾಯಿ ದೇಣಿಗೆ ಬಂದಿತ್ತು. ಅದರಲ್ಲಿ 1,686 ಕೋಟಿ ರೂ.ಗಳು ಬಾಂಡ್‌ಗಳ ಮೂಲಕ ಮತ್ತು 856 ಕೋಟಿ ರೂ.ಗಳು ಟ್ರಸ್ಟ್‌ಗಳ ಮೂಲಕ ಬಂದಿವೆ.ಚುನಾವಣಾ ಬಾಂಡ್‌ಗಳನ್ನು ರದ್ದುಗೊಳಿಸಿದ ನಂತರ, ಕಾರ್ಪೊರೇಟ್ ದಾನಿಗಳು ಇನ್ನೂ ಭಾಗಶಃ ಅನಾಮಧೇಯತೆ ಬಯಸುತ್ತಿದ್ದಾರೆ. ಪಕ್ಷವಾರು ತಮ್ಮ ಕೊಡುಗೆಗಳ ವಿಂಗಡಣೆಗೆ ಸಂಬಂಧಿಸಿದಂತೆ ಈಗಲೂ ಬಿಜೆಪಿ ಹೆಚ್ಚು ದೇಣಿಗೆ ಪಡೆದವರ ಪಟ್ಟಿಯಲ್ಲಿ ಮುಂಚೂಷಣಿಯಲ್ಲಿದೆ

ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿರುವ ಮಾಹಿತಿಯ ಪ್ರಕಾರ, ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಪಕ್ಷ ಮತದಾರರ ಟ್ರಸ್ಟ್‌ಗಳ ಮೂಲಕ ಕಳುಹಿಸಲಾದ ಸುಮಾರು 4,276 ಕೋಟಿ ರೂ.ಗಳ ಕೊಡುಗೆಗಳಲ್ಲಿ ಶೇಕಡಾ 83.6 ರಷ್ಟು ಅಂದರೆ 3,967 ಕೋಟಿ ರೂಪಾಯಿ ದೇಣಿಗೆ ಹರಿದು ಬಂದಿದೆ ಎಂದು ತಿಳಿಸಲಾಗಿದೆ.

2023–24ಕ್ಕೆ ಹೋಲಿಸಿದರೆ, ಈ ಮಾರ್ಗದ ಮೂಲಕ ಬಿಜೆಪಿಗೆ ಕಾರ್ಪೊರೇಟ್ ದೇಣಿಗೆಗಳಲ್ಲಿ ನಾಲ್ಕು ಪಟ್ಟು ಹೆಚ್ಚಳವಾಗಿದೆ. ಕಾಂಗ್ರೆಸ್ ಪಕ್ಷಕ್ಕೆ ಶೇಕಡಾ 7.3ರಷ್ಟು ಮತ್ತು ತೃಣಮೂಲ ಕಾಂಗ್ರೆಸ್ ಶೇಕಡಾ 3.6 ರಷ್ಟು ಮಾತ್ರ ದೇಣಿಗೆ ಬಂದಿದೆ. ದೇಣಿಗೆ ನೀಡಿದವರ ಹೆಸರು ಬಹಿರಂಗ ಪಡಿಸಿಲ್ಲ.

ಚುನಾವಣಾ ಟ್ರಸ್ಟ್‌ಗಳ ಮೂಲಕ ಬರುವ ದೇಣಿಗೆಗಳು ಪಕ್ಷಗಳು ಸ್ವೀಕರಿಸುವ ಒಟ್ಟು ಕೊಡುಗೆಗಳ ಒಂದು ಭಾಗ ಮಾತ್ರ. ಇತರ ಮೂಲಗಳಲ್ಲಿ ವ್ಯಕ್ತಿಗಳು, ಕಾರ್ಪೊರೇಟ್‌ಗಳು, ಸಂಸ್ಥೆಗಳು ಮತ್ತು ಕಲ್ಯಾಣ ಸಂಸ್ಥೆಗಳು ನೇರವಾಗಿ ದೇಣಿಗೆ ನೀಡುತ್ತಿವೆ. ಕಳೆದ ವರ್ಷಗಳಲ್ಲಿ, ಟ್ರಸ್ಟ್‌ಗಳ ಮೂಲಕ ಬರುವ ದೇಣಿಗೆಗಳಿಗಿಂತ ಟ್ರಸ್ಟ್‌ರಹಿತ ದೇಣಿಗೆಗಳ ಪ್ರಮಾಣ ಬಿಜೆಪಿ ಪಕ್ಷಕ್ಕೆ ಸ್ಥಿರವಾಗಿ ಹೆಚ್ಚಾಳವಾಗಿದೆ.

2024–25ರಲ್ಲಿ ಬಿಜೆಪಿಯ 3,577.5 ಕೋಟಿ ರೂ. ಕೊಡುಗೆ ಸ್ವೀಕೃತಿಗಳಲ್ಲಿ, ಪ್ರುಡೆಂಟ್ ಎಲೆಕ್ಟೋರಲ್ ಟ್ರಸ್ಟ್ 2,180.7 ಕೋಟಿ ರೂ., ಪ್ರೋಗ್ರೆಸ್ಸಿವ್ 757.6 ಕೋಟಿ ರೂ., ಎಬಿ ಜನರಲ್ 460 ಕೋಟಿ ರೂ., ನ್ಯೂ ಡೆಮಾಕ್ರಟಿಕ್ 150 ಕೋಟಿ ರೂ., ಹಾರ್ಮನಿ ಇಟಿ 30.1 ಕೋಟಿ ರೂ., ಟ್ರಯಂಫ್ 21 ಕೋಟಿ ರೂ., ಜಯಭರತ್ 5 ಕೋಟಿ ರೂ., ಜನಕಲ್ಯಾಣ್ ಇಟಿ 9.5 ಲಕ್ಷ ರೂ. ಮತ್ತು ಐಂಜಿಗಾರ್ಟಿಗ್ ಇಟಿ 7.75 ಲಕ್ಷ ರೂಪಾಯಿ ದೇಣಿಗೆ ಬಂದಿದೆ.

2024–25ರಲ್ಲಿ ಕಾಂಗ್ರೆಸ್ ಗೆ ಪ್ರುಡೆಂಟ್ ನಿಂದ 216.3 ಕೋಟಿ ರೂ., ಪ್ರೋಗ್ರೆಸಿವ್ ನಿಂದ 77.3 ಕೋಟಿ ರೂ., ಎಬಿ ಜನರಲ್ ಇಟಿಯಿಂದ 15 ಕೋಟಿ ರೂ., ನ್ಯೂ ಡೆಮಾಕ್ರಟಿಕ್ ಇಟಿಯಿಂದ 5 ಕೋಟಿ ರೂ. ಮತ್ತು ಜನ್ ಕಲ್ಯಾಣ್ ಇಟಿಯಿಂದ 9.5 ಲಕ್ಷ ರೂಪಾಯಿ ಮಾತ್ರ ದೇಣಿಗೆ ಬಂದಿದೆ ಎಂದು ಮೂಲಗಳು ತಿಳಿಸಿವೆ

2024–25ರಲ್ಲಿ ಕಾಂಗ್ರೆಸ್ ಪಕ್ಷ ತನ್ನ ಒಟ್ಟು 517 ಕೋಟಿ ಕೊಡುಗೆಗಳಲ್ಲಿ 313 ಕೋಟಿ ರೂ.ಗಳಿಗೂ ಹೆಚ್ಚು ಹಣವನ್ನು ಟ್ರಸ್ಟ್ ಮೂಲಕ ಪಡೆದುಕೊಂಡಿದೆ.

ಕಳೆದ ಹಣಕಾಸು ವರ್ಷದಲ್ಲಿ 15 ಪಕ್ಷಗಳಿಗೆ ಒಟ್ಟು 2,668 ಕೋಟಿ ರೂ.ಗಳನ್ನು ವಿತರಿಸಿದೆ. ಟಾಟಾ ಗ್ರೂಪ್–ಸಂಬಂಧಿತ ಪ್ರೋಗ್ರೆಸ್ಸಿವ್ ಇಟಿ 2024–25ರಲ್ಲಿ ಒಟ್ಟು 915 ಕೋಟಿ ರೂ.ಗಳ ಕೊಡುಗೆಯೊಂದಿಗೆ ಎರಡನೇ ಸ್ಥಾನದಲ್ಲಿದೆ, ಅದರಲ್ಲಿ 757 ಕೋಟಿ ರೂ.ಗಳು ಬಿಜೆಪಿಗೆ, 77 ಕೋಟಿ ರೂ.ಗಳು ಕಾಂಗ್ರೆಸ್‌ಗೆ ಮತ್ತು 10 ಕೋಟಿ ರೂ.ಗಳು ಇತರ ಎಂಟು ಪಕ್ಷಗಳಿಗೆ ದೇಣಿಗೆ ನೀಡಿವೆ.

ಪ್ರುಡೆಂಟ್‌ನ 2,668 ಕೋಟಿ ರೂಪಾಯಿಗಳನ್ನು ಬಿಜೆಪಿ 2,180.7 ಕೋಟಿ ರೂ ಕಾಂಗ್ರೆಸ್ 216.3 ಕೋಟಿ ರೂ, ತೃಣಮೂಲ ಕಾಂಗ್ರೆಸ್ 92 ಕೋಟಿ ರೂ., ವೈಎಸ್‌ಆರ್ ಕಾಂಗ್ರೆಸ್ ಪಕ್ಷ 88 ಕೋಟಿ ರೂ; ಟಿಡಿಪಿ ಗೆ 40 ಕೋಟಿ ರೂ, ಎಎಪಿ 6.4 ಕೋಟಿ ರೂ. ಭಾರತ್ ಧರ್ಮ ಜನ ಸೇನಾ 10 ಕೋಟಿ ರೂ. ಬಿಆರ್‌ಎಸ್, ಜೆಡಿಯು, ಬಿಜೆಡಿ ಮತ್ತು ಎಜೆಎಸ್‌ಯು ತಲಾ 5 ಕೋಟಿ ರೂ; ಸಿಕ್ಕಿಂ ಡೆಮಾಕ್ರಟಿಕ್ ಫ್ರಂಟ್ 2.5 ಕೋಟಿ ರೂ.,ಎಲ್‌ಜೆಪಿ ಮತ್ತು ಎನ್‌ಸಿಪಿ ತಲಾ 1 ಕೋಟಿ ರೂ ಮತ್ತು ಪ್ರಜಾ ಶಾಂತಿ ಪಕ್ಷ 50 ಲಕ್ಷ ರೂಪಾಯಿ ದೇಣಿಗೆ ಬಂದಿದೆ.

# ಜನ ಸಾಮಾನ್ಯರು ನೇರವಾಗಿ ಠಾಣೆಗೆ ಬಂದು ದೂರು ಕೊಡಿ




**ಸೈದಾಪುರ:ಡಿ.23:**ಜನ ಸಾಮಾನ್ಯರು ಯಾವುದೇ ಮಧ್ಯವರ್ತಿಗಳಿಲ್ಲದೆ ನೇರವಾಗಿ ಠಾಣೆಗೆ ಬಂದು ದೂರು ದಾಖಲಿಸಬಹುದು ಅಲ್ಲಿಯೂ ತಮ್ಮ ಸಮಸ್ಯೆಗೆ ಸ್ಪಂದನೆ ಸಿಗದಿದ್ದಲ್ಲಿ ನೇರವಾಗಿ ನನ್ನನ್ನು ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬಹುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಅಭಯ ನೀಡಿದರು.

ಪಟ್ಟಣದ ಕನಕ ಭವನದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕುರಿಗಾಹಿಗಳ ಸಮಸ್ಯೆಗಳು ಮತ್ತು ಕಾನೂನು ಅರಿವು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಕುರಿ ಕಳ್ಳತನ ಪ್ರಕರಣಗಳು ನಡೆದಲ್ಲಿ ಕೂಡಲೇ ಹತ್ತಿರದ ಠಾಣೆಗೆ ಬಂದು ದೂರು ದಾಖಲಿಸಿ ಅದರ ಮುಂದಿನ ಕ್ರಮವನ್ನು ನಮ್ಮ ಇಲಾಖೆಯ ಅಧಿಕಾರಿಗಳು ಕೈಗೊಳ್ಳಲಿದ್ದಾರೆ. ಇದರ ಜೊತೆಗೆ ಕುರಿಗಾಹಿಗಳಿಗೆ ಕಾನೂನಿನ ಅರಿವು ಅತ್ಯಗತ್ಯವಾಗಿದೆ. ಅದನ್ನು ಸಮರ್ಪಕವಾಗಿ ತಿಳಿದುಕೊಂಡು ಸರಕಾರದ ಯೋಜನೆಗಳ ಲಾಭ ಪಡೆದುಕೊಳ್ಳುವಂತೆ ಸಲಹೆ ನೀಡಿದರು.

ಇದಕ್ಕೂ ಮುಂಚೆ ಜಿಲ್ಲಾ ಕುರುಬ ಸಮಾಜದ ಮಾಜಿ ಅಧ್ಯಕ್ಷ ವಿಶ್ವನಾಥ ನೀಲಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಕುರಿಗಳು ಸತ್ತ ಸಂದರ್ಭದಲ್ಲಿ ಪಶುಸಂಗೋಪನೆ ಇಲಾಖೆಯ ಅಧಿಕಾರಿಗಳು ಸೂಕ್ತ ಕ್ರಮವಹಿಸಿ ಸರಕಾರದ ಪರಿಹಾರಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಸಮಾಜದ ಹಿರಿಯ ಮುಖಂಡ ಸಿದ್ದಣ್ಣಗೌಡ ಕಾಡಂನೋರ ಅವರು ಮಾತನಾಡಿ, ಪಶು ಸಂಗೋಪನೆ ಇಲಾಖೆಯ ಅಧಿಕಾರಿಗಳು ಕುರಿಗಳ ಆರೋಗ್ಯ ತಪಾಸಣೆ ಮಾಡಬೇಕು ಆದರೆ ಬಹುತೇಕ ಕಡೆ ನಮ್ಮ ಕುರಿಗಾಹಿಗಳೇ ಚಿಕಿತ್ಸೆ ಕೊಡುತ್ತಿದ್ದಾರೆ, ಇಲಾಖೆ ಏನು ಮಾಡುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಡಿವೈಎಸ್ಪಿ ಸುರೇಶ ನಾಯಕ, ಉಪ ತಹಸೀಲ್ದಾರ ದಸ್ತಗಿರಿ ನಾಯಕ, ಪೊಲೀಸ್ ಇನ್ ಸ್ಪೆಕ್ಟರ್ ಶಿವಾನಂದ ಎಂ ಮರಡಿ, ಅರಣ್ಯ ಇಲಾಖೆಯ ಅಧಿಕಾರಿ ಮಂಜುನಾಥ, ಪಶುಸಂಗೋಪನೆ ಇಲಾಖೆ ಡಾ. ಆಕಾಶ, ಡಾ. ಸೃಜನ ಪಿಡಿಓ ವಿಜಯಲಕ್ಷ್ಮಿ, ಕುರುಬ ಸಮಾಜದ ಹಿರಿಯ ಮುಖಂಡರಾದ ಚಂದ್ರಶೇಖರ ವಾರದ, ಸಿದ್ದಣ್ಣಗೌಡ ಕಾಡಂನೋರ, ಭೀಮಶಪ್ಪ ಜೇಗರ, ವಿಶ್ವನಾಥ ನೀಲಹಳ್ಳಿ, ಪ್ರಭುಲಿಂಗ ವಾರದ, ಶೇಷಪ್ಪಜೇಗರ, ಜಿಲ್ಲಾಕುರುಬ ಸಮಾಜದ ಅಧ್ಯಕ್ಷರಾದ ಮಲ್ಲಣ್ಣ ಐಕೂರು, ಸಾಬರೆಡ್ಡಿ, ವೆಂಕೋಬ ತುರುಕಾನ ದೊಡ್ಡಿ, ವಲಯ ಅಧ್ಯಕ್ಷ ರವೀಂದ್ರ ಕಡೇಚೂರು ಸೇರಿದಂತೆ ಇತರರಿದ್ದರು. ಕಾರ್ಯಕ್ರಮವನ್ನು ಸಿದ್ದು ಪೂಜಾರಿ ಬದ್ದೇಪಲ್ಲಿ ಅವರು ನಿರ್ವಹಿಸಿದರು.

# ಯುವ ರೈತ ಆತ್ಮಹತ್ಯೆ



**ಜೇವರ್ಗಿ, ಡಿ.23–** ತಾಲೂಕಿನ ಕೂಟನೂರ ಗ್ರಾಮದ ಯುವ ರೈತ ಆನಂದ್ ಸಿದ್ದಪ್ಪ ತುರಾಯಿ (30) ಸಾಲಬಾಧೆ ತಾಳಲಾರದೆ ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣ ಜೇವಗಿ ಪೊಲೀಸ ಠಾಣೆಯಲ್ಲಿ ದಾಖಲಾಗಿದೆ.

ವಿಷಕಾರಿ ಕಿಟನಾಶಕ ಹತ್ತಿ ಬೆಳೆಗೆ ಸಿಂಪಡಿಸುವ ಎಣ್ಣೆ ಸೇವಿಸಿ ಆತ್ಮಹತ್ಯೆ ಮಾಡಿಕೊಂಡ ಹೃದಯವಿದ್ರಾವಕ ಘಟನೆ ನಡೆದಿದ್ದು, ಈ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಮೊದಲನೇ ಪುಟದಿಂದ

### ಅಧಿಕಾರ ಹಂಚಿಕೆ ಒಪ್ಪಂದವಾಗಿದೆ, ಸಿದ್ದರಾಮಯ್ಯನವರು ಅದರಂತೆ ನಡೆದುಕೊಳ್ಳಬೇಕು : ಡಿಕೆಶಿ ಬಣದ ಸ್ಫೋಟಕ ಹೇಳಿಕೆ

ಕ್ಷೇತ್ರದ ಶಾಸಕ ಎಚ್.ಡಿ.ರಂಗನಾಥ್, ಅಧಿಕಾರ ಹಂಚಿಕೆಯ ಒಪ್ಪಂದವಾಗಿದೆ ಎಂದು ಸ್ಪಷ್ಟವಾಗಿ ಹೇಳಿದ್ದಾರೆ.ಅಧಿಕಾರ ಹಂಚಿಕೆ ಒಪ್ಪಂದ ಆಗಿದೆ ಎಂದು ಉಪಮುಖ್ಯಮಂತ್ರಿಯವರು ನಮೊಂದಿಗೆ ಹೇಳಿದ್ದಾರೆ. ಸಿದ್ದರಾಮಯ್ಯ ಅವರು ಕೊಟ್ಟ ಮಾತಿನಂತೆ ನಡೆದುಕೊಳ್ಳದಿರುವುದು ಸರಿಯಲ್ಲ ಎಂದು ಹೆಚ್.ಡಿ.ರಂಗನಾಥ್ ಹೇಳಿದ್ದಾರೆ.ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಅಣ್ಣ–ತಮಂದಿರಂತೆ ಕೆಲಸ ಮಾಡುತ್ತಿದ್ದಾರೆ. ಒಪ್ಪಂದವಾಗಿರುವಂತೆ ಹೈಕಮಾಂಡ್ ನಾಯಕರು ಎಲ್ಲವನ್ನು ಸರಿಪಡಿಸುತ್ತಾರೆ ಎಂಬ ವಿಶ್ವಾಸವಿದೆ. ಸಿದ್ದರಾಮಯ್ಯ ಅವರು ಕೊಟ್ಟ ಮಾತಿನಿಂದ ಹಿಂದೆ ಸರಿಯುವುದಿಲ್ಲ ಒಳ್ಳೆಯದಲ್ಲ. ಮುಂದಿನ

ದಿನಗಳಲ್ಲಿ ಎಲ್ಲವೂ ಸರಿ ಹೋಗಲಿದೆ, ಒಳ್ಳೆಯದಾಗುತ್ತದೆ ಎಂದು ರಂಗನಾಥ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.ಅಧಿಕಾರ ಹಂಚಿಕೆಯ ಯಾವುದೇ ಒಪ್ಪಂದ ಆಗಿಲ್ಲ ಎಂದು ಮುಖ್ಯಮಂತ್ರಿ ಹೇಳಿರುವ ಬಗ್ಗೆ ನಾನು ಪ್ರತಿಕ್ರಿಯಿಸಲು ಬಯಸುವುದಿಲ್ಲ. ಡಿಕೆ ಶಿವಕುಮಾರ್ ಅವರು ಒಪ್ಪಂದ ಆಗಿದೆ ಎಂದು ಹೇಳಿದ್ದಾರೆ. ನಾವುಅದನ್ನು ನಂಬುತ್ತೆ?ವೆ. ಹೈಕಮಾಂಡ್ ನಾಯಕರು ಸೂಕ್ತ ಸಂದರ್ಭದಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ಹೇಳಿದ್ದಾರೆ.ಸ್ಫೋಟಕ ತಿರುವು: ಅಧಿಕಾರ ಹಂಚಿಕೆಯ ಬಗ್ಗೆ ಒಪ್ಪಂದ ಆಗಿದೆಯೋ ಇಲ್ಲವೋ ಎಂಬ ಗೊಂದಲಗಳೆ ರಾಜ್ಯದ ರಾಜಕಾರಣವನ್ನು ರಾಡಿ ಮಾಡಿವೆ. 2023ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಭರ್ಜರಿ ಬಹುಮತಕ್ಕೆ ಗಳಿಸಿದಾಗ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗೆ ದೆಹಲಿಯಲ್ಲಿ ಒಂದು ವಾರ ಕಾಲ ಸಂಧಾನದ ಕಸರತ್ತುಗಳು ನಡೆದವು.ಡಿ.ಕೆ.ಶಿವಕುಮಾರ್ ದೆಹಲಿಗೆ ಹೋಗುವ ಮೊದಲು ತಾವು ಕೆಲಸ ಮಾಡಿದ್ದು, ಅದಕ್ಕೆ ಕೂಲಿ ಕೇಳುತ್ತಿದ್ದೇನೆ ಎಂದು ಹೇಳಿದ್ದರು. ಆ ವೇಳೆ ಸಿದ್ದರಾಮಯ್ಯ ಯಾವುದೇ ಮಾತನಾಡದೆ ಮೌನವಾಗಿದ್ದುಕೊಂಡು ಒಳಗೊಳಗೆ ರಣತಂತ್ರಗಳನ್ನು ರೂಪಿಸಿ ಹೈಕಮಾಂಡ್ ಮನ ಗೆದ್ದಿದ್ದರು. ಸಂಧಾನ ಸೂತ್ರ ಯಶಸ್ವಿಯಾದ ಬಳಿಕ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ದೆಹಲಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಸಿದ್ದರಾಮಯ್ಯ ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಲಾಗಿದೆ. ಡಿಕೆ ಶಿವಕುಮಾರ್ ಅವರನ್ನು ಉಪಮುಖ್ಯಮಂತ್ರಿಯಾಗಿ ನಿಯೋಜಿಸಲಾಗುತ್ತಿದೆ. ಕರ್ನಾಟಕಕ್ಕೆ ಒಂದೇ ಒಂದು ಉಪಮುಖ್ಯಮಂತ್ರಿ ಹುದ್ದೆಗೆ ಮಾತ್ರ ಇರಲಿದೆ. ಲೋಕಸಭೆಯ ಚುನಾವಣೆಯವರೆಗೂ ಡಿಕೆ ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿ ಮುಂದುವರೆಯಲಿದ್ದಾರೆ ಎಂದು ಹೇಳಿದ್ದರು.

ಅದರ ಬಳಿಕ ಬೆಂಗಳೂರಿನಲ್ಲಿ ಕಾಂಗ್ರೆಸ್ ಶಾಸಕಾಂಗ ಸಭೆ ನಡೆದು ಸಿದ್ದರಾಮಯ್ಯ ಅವರನ್ನು ಶಾಸಕಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಿರುವುದಾಗಿ ಅಧಿಕೃತ ಘೋಷಣೆ ಹೊರ ಬಿದ್ದಿತ್ತು. ಅದರ ನಂತರ ಎರಡುವರೆ ವರ್ಷ ತುಂಬಿದ ವೇಳೆಯಲ್ಲಿ ನಾಯಕತ್ವ ಬದಲಾವಣೆಯಾಗಲಿದೆ ಎಂಬ ಚರ್ಚೆಗಳು ಆರಂಭದಿಂದಲೂ ಇವೆ. ಲೋಕಸಭೆ ಚುನಾವಣೆಗೂ ಮುನ್ನ ಸಿದ್ದರಾಮಯ್ಯ ಅವರ ಬಣ, ಜಾತಿವಾರು ಲೆಕ್ಕಾಚಾರದಲ್ಲಿ ಮೂರರಿಂದ ಐದು ಉಪಮುಖ್ಯಮಂತ್ರಿ ಹುದ್ದೆಗಳನ್ನು ಸೃಷ್ಟಿಸಬೇಕು ಎಂಬ ಬೇಡಿಕೆ ಮಂಡಿಸಿತ್ತು. ಒಂದಷ್ಟು ದಿನ ಆ ಚರ್ಚೆ ಪಕ್ಷದಲ್ಲಿ ಗೊಂದಲ ಮೂಡಿಸಿತು.ಮಲ್ಲಿಕಾರ್ಜುನ ಖರ್ಗೆ, ಎಲ್ಲರೂ ಬಾಯಿ ಮುಚ್ಚಿಕೊಂಡು ತಮಗೆ ವಹಿಸಿರುವ ಜವಾಬ್ದಾರಿಯನ್ನು ನಿರ್ವಹಣೆ ಮಾಡಬೇಕು. ಹೈಕಮಾಂಡ್ ಕಾಲಕಾಲಕ್ಕೆ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ಗದರುವ ಮೂಲಕ ಎಲ್ಲವನ್ನು ತಣ್ಣಗಾಗಿಸಿದರು.ಲೋಕಸಭೆಯ ಚುನಾವಣೆ ಬಳಿಕ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗಬೇಕು ಎಂದು ಸಿದ್ದರಾಮಯ್ಯ ಅವರ ಆಪ್ತ ಸಚಿವರಾದ ಸತೀಶ್ ಜಾರಕಿಹೊಳಿ ನೇತೃತ್ವದಲ್ಲಿ ಒಂದಿಷ್ಟು ಲಾಬಿಗಳು ನಡೆದಿದ್ದವು. ಆದರೆ ಹೈಕಮಾಂಡ್ ಅದ್ಯಾವುದಕ್ಕೂ ಮಣೆ ಹಾಕಲಿಲ್ಲ. ಇದಕ್ಕೆ ಪ್ರತಿಯಾಗಿ ಡಿ.ಕೆ. ಬಣ ಅಧಿಕಾರ ಹಂಚಿಕೆಯ ಒಪ್ಪಂದವಾಗಿದೆ ಎಂಬ ಭಾವನೆಯನ್ನು ಬಲವಾಗಿ ಬಿತ್ತಲಾರಂಭಿಸಿದೆ. ಈ ಮೂಲಕ ನಾಯಕತ್ವ ಬದಲಾವಣೆಗೆ ಪಟ್ಟು ಹಿಡಿದಿದೆ. ಡಿ.ಕೆ.ಬಣದ ಶಾಸಕರ ದೆಹಲಿ ಯಾತ್ರೆಯಾಗಿದೆ. ಸಂಧಾನಕ್ಕಾಗಿ ಬೆಂಗಳೂರಿನಲ್ಲಿ ಉಪಹಾರ ಕೂಟಗಳಾಗಿವೆ.ಎಲ್ಲದರ ನಡುವೆಯೂ ಯಾವುದೇ ಒಪ್ಪಂದ ಆಗಿಲ್ಲ ಎಂದು ಸಿದ್ದರಾಮಯ್ಯ ಹೇಳಿದ್ದರು. ಒಪ್ಪಂದ ಆಗಿದೆ ಎಂದು ಈವರೆಗೂ ಯಾರೂ ಬಹಿರಂಗವಾಗಿ ಮಾತನಾಡಿರಲಿಲ್ಲ. ಇದೇ ಮೊದಲ ಬಾರಿಗೆ ಎಚ್.ಡಿ.ರಂಗನಾಥ್ ಒಪ್ಪಂದ ಆಗಿದೆ ಎಂದು ಉಪಮುಖ್ಯಮಂತ್ರಿ ಹೇಳಿದ್ದಾರೆ ಎಂದು ಸ್ಪಷ್ಟಪಡಿಸುವ ಮೂಲಕ ಕಾಂಗ್ರೆಸ್ಸಿನಲ್ಲಿ ರಾಜಕೀಯ ಜಿದ್ದಾಜಿದ್ದಿಯನ್ನು ಬೇರೆ ಮಗ್ಗಲಿಗೆ ತಿರುಗಿಸಿದ್ದಾರೆ.

### ಸರ್ಕಾರಿ ಅಧಿಕಾರಿಗಳಿಗೆ ಲೋಕಾಯುಕ್ತ ಶಾಕ್, ರಾಜ್ಯದ ಹಲವೆಡೆ ಮನೆ–ಕಚೇರಿಗಳ ಮೇಲೆ ಏಕಕಾಲಕ್ಕೆ ದಾಳಿ

ಶೋಧ ಕಾರ್ಯ ನಡೆಸಲಾಗುತ್ತಿದೆ. ಅದರ ಜತೆಗೆ ಸಿಂಧನೂರು ಕಚೇರಿ, ಯಾದಗಿರಿ ತೋಟದ ಮನೆ, ಜೋಳದಡಗಿತೆಯಲ್ಲಿರುವ ಅವರ ತಂಗಿ ಮನೆ ಮೇಲೆಯೂ ದಾಳಿ ನಡೆಸಲಾಗಿದೆ. ಯಾದಗಿರಿಯಲ್ಲಿ 30 ಎಕರೆ ಜಮೀನು, ಯಾದಗಿರಿಯಲ್ಲಿ ಲೆಔಟ್ ಗಳು, ಚಂದ್ರಬಂಡಾ ಬಳಿ ಜಮೀನು ಸೇರಿದಂತೆ ಸಾಕಷ್ಟು ಕಡೆ ಆಸ್ತಿ ಸಂಪಾದನೆ ಮಾಡಿರುವ ಮಾಹಿತಿಗಳು ಲಭ್ಯವಾಗಿದೆ. ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆ ಲೋಕಾಯುಕ್ತ ಪೊಲೀಸರು ಐದು ತಂಡಗಳಾಗಿ ದಾಳಿ ತಂಡ ಮಾಡಿದ್ದಾರೆ. ಇನ್ನೂ ಒಂದೂವರೆ ವರ್ಷ ಸೇವಾವಧಿ ಬಾಕಿ ಇತ್ತು. ಸಿಂಧನೂರಿನಲ್ಲಿಯೇ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದರು.

ರಾಯಚೂರು, ಬಾಗಲಕೋಟೆ, ವಿಜಯಪುರ ಹಾಗೂ ಉತ್ತರ ಕನ್ನಡ ಸೇರಿದಂತೆ ಹತ್ತಕ್ಕೂ ಹೆಚ್ಚು ಸ್ಥಳಗಳಲ್ಲಿ ಅಧಿಕಾರಿಗಳು ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ.

ರಾಯಚೂರು ನಗರದ ಸುಮಾರು 4 ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ನಡೆಸುತ್ತಿದ್ದಾರೆ. ನಿವೃತ್ತ ಮಹಿಳಾ ಅಧಿಕಾರಿ ವಿಜಯಲಕ್ಷ್ಮಿ ಅವರ ಮನೆ ಮತ್ತು ಅವರಿಗೆ ಸೇರಿದ ಇತರೆ ಕಚೇರಿ ಮತ್ತು ನಿವಾಸಗಳನ್ನ ಪರಿಶೀನನೆ ನಡೆಸಿದ್ದಾರೆ. ನಿವೃತ್ತಿಯ ನಂತರವೂ ಅಕ್ರಮ ಆಸ್ತಿ ಹೊಂದಿರುವ ದೂರಿನ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದೆ ಎನ್ನಲಾಗಿದೆ.

ಸಾರ್ವಜನಿಕ ಸೇವೆಯಲ್ಲಿದ್ದುಕೊಂಡು ಜನಸಾಮಾನ್ಯರ ಹಣವನ್ನು ಲೂಟಿ ಮಾಡಿ ಅಕ್ರಮ ಆಸ್ತಿ ನಿರ್ಮಿಸುವವರ ವಿರುದ್ಧ ಲೋಕಾಯುಕ್ತ ಈ ಕಠಿಣ ಕ್ರಮ ಕೈಗೊಂಡಿದೆ. ಸಂಜೆ ವೇಳೆಗೆ ಈ ದಾಳಿಯ ಸಂಪೂರ್ಣ ಮಾಹಿತಿ ಮತ್ತು ವಶಪಡಿಸಿಕೊಂಡ ಆಸ್ತಿಯ ಒಟ್ಟು ಮೌಲ್ಯ ಜಪ್ತಿ ಮಾಡುವ ನಿರೀಕ್ಷೆಯಿದೆ.

ರಾಯಚೂರು ಜಿಲ್ಲೆಯಲ್ಲಿ ನಿವೃತ್ತ ಸಹಾಯಕ ಇಂಜಿನಿಯರ್ ವಿಜಯಲಕ್ಷ್ಮೀ ಅವರ ಶ್ರೀ ರೇಣುಕಾ ನಿಲಯದ ಮನೆಯಲ್ಲಿ ಪರಿಶೀಲನೆ ನಡೆದಿದೆ. ರಾಯಚೂರು ಲೋಕಾಯುಕ್ತ ಎಸ್ ಪಿ ಸತೀಶ್ ಚಿಟಗುಬ್ಬಿ ಮಾರ್ಗದರ್ಶನದಲ್ಲಿ ಅಧಿಕಾರಿಗಳ ದಾಳಿ ನಡೆಸಿದ್ದಾರೆ.

**ಬಲೆಗೆ ಬಿದ್ದ ಅಧಿಕಾರಿಗಳು**–ಸಿಂಧನೂರಿನಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಎಇಇ ಬಿ.ವಿಜಯಲಕ್ಷ್ಮಿ ಮನೆ,ರಾಯಚೂರು ನಗರದಲ್ಲಿನ ಎರಡು ಮನೆ ಸೇರಿ ಐದು ಕಡೆ ದಾಳಿ,ರಾಯಚೂರು, ಕೊಪ್ಪಳ, ಬಳ್ಳಾರಿ ಮೂರು ಜಿಲ್ಲೆಯ ಐದು ತಂಡಗಳಿಂದ ದಾಳಿ,ಆದಾಯಕ್ಕಿಂತ ಅಧಿಕ ಆಸ್ತಿ ಆರೋಪ ಹಿನ್ನೆಲೆ ದಾಳಿ,ರಾಯಚೂರಿನ ಐಡಿಎಸ್‌ಎಂಟಿ ಬಡಾವಣೆಯಲ್ಲಿನ ಮನೆ, ಗಂಗಾಪರಮೇಶ್ವರ ಲೇಔಟ್‌ನಲ್ಲಿನ ಮನೆ ಯಾದಗಿರಿ, ಜೋಳದೆಡಗಿ ಹಾಗೂ ಸಿಂಧನೂರಿನಲ್ಲಿ ಆರ್‌ಡಬ್ಲ್ಯೂಎಸ್ ಕಚೇರಿ ಮೇಲೆ ದಾಳಿ ಒಟ್ಟು 49 ಕಡೆಗಳಲ್ಲಿ ಆಸ್ತಿ ಮಾಡಿರುವ ಎಇಇ ಬಿ.ವಿಜಯಲಕ್ಷ್ಮಿ

### ಅದ್ದೂರಿಯಾಗಿ ಜರುಗಿದ ಅಯ್ಯಪ್ಪ ಸ್ವಾಮಿ ಮಂಡಲ ಪೂಜೆ ಹಾಗೂ ಭಾವಚಿತ್ರ ಮೇರವಣಿಗೆ

ಉಪ ದೇವತೆಗಳ ಕಳಸಾಭಿಷೇಕಂ ನೆರವೇರಿಸಿದ ನಂತರದಲ್ಲಿ ಈಶ್ವರ ದೇವಸ್ಥಾನದಲ್ಲಿ ತೆರೆದ ಅಲಂಕೃತ ವಾಹನದಲ್ಲಿ ಭಾವಚಿತ್ರ ಪ್ರತಿಷ್ಠಾಪಿಸಿ, ಉತ್ಸವ ಕರ್ಪೂರದಾರತಿ ಬೆಳಗುತ್ತ ಮೆರವಣಿಗೆಗೆ ಮೂರ್ತಿಯೊಂದಿಗೆ ಚಾಲನೆ ನೀಡಲಾಯಿತು. ಈಶ್ವರ

ದೇವಸ್ಥಾನದಿಂದ ಆರಂಭಗೊಂಡ ಮೆರವಣಿಗೆ ಹಳೆಬಸ್ ನಿಲ್ದಾಣ, ಹಳೆ ವಿಜಯ ಬ್ಯಾಂಕ್ ರಸ್ತೆ, ಗಡಿಯಾರ ವೃತ್ತ, ಅಂಚೆ ಕಚೇರಿ, ಬಸ್ ನಿಲ್ದಾಣ ಮಾರ್ಗವಾಗಿ ಅಯ್ಯಪ್ಪಸ್ವಾಮಿ ದೇವಸ್ಥಾನಕ್ಕೆ ಸಾಗಿ ಬಂದಿತು.ನಂತರದಲ್ಲಿ ಅನ್ನಸಂತರ್ಪಣೆ ನೆರವೇರಿತು.ಸಂಜೆ ದೀಪಾರಾಧನೆ, ಅಯ್ಯಪ್ಪಸ್ವಾಮಿ 18 ಮೆಟ್ಟಿಲು ಪಡಿ ಪೂಜೆ, ಪುಷ್ಪಾಭಿಷೇಕ,ಪಾನಕ ನೈವೇದ್ಯ ಅರ್ಪಿಸಿ ಹರಿವರಾಸನಂ ಮೂಲಕ ಪೂಜೆಗಳಿಗೆ ವಿದಾಯ ಹೇಳಲಾಯಿತು.ಕೇರಳ ಮೂಲದ ಪ್ರಶಾಂತ್ ನಂಬೊದರಿ,ನೇತೃತ್ವದಲ್ಲಿ ಸಿದ್ರಾಮು ಗುರುಸ್ವಾಮಿ ನಗರಗುಂಡ ಅವರ ಸಹಕಾರದಲ್ಲಿ ಪೂಜಾ ಕಾರ್ಯಗಳು ನಡೆದವು. ಅಯ್ಯಪ್ಪಸ್ವಾಮಿ ದೇವಸ್ಥಾನದ ಸಮಿತಿ ಟ್ರಸ್ಟ ಅಧ್ಯಕ್ಷ ಮನೋಹರ ರೆಡ್ಡಿ ಮುನ್ನೂರು,ಕಾರ್ಯದರ್ಶಿ ಈರಣ್ಣ ಗುರುಸ್ವಾಮಿ, ಖಜಾಂಚಿ ಬಾಲನ್, ಮಾರೆಪ್ಪ ನಾಯಕ, ರಾಜೇಶ ಮಾಣಿಕ್ ಸೇರಿದಂತೆ ಎಲ್ಲಾ ಭಕ್ತದಿಗಳು ಭಾಗವಹಿಸಿದ್ದರು

### ಬಿಸಿಎಂ ವಿದ್ಯಾರ್ಥಿ ವೇತನ, ಶುಲ್ಕ ವಿನಾಯಿತಿಗೆ ಅರ್ಜಿ ಸಲ್ಲಿಕೆ ಅವಧಿ ಜನವರಿ 31ರವರೆಗೆ ವಿಸ್ತರಣೆ

**ರಾಯಚೂರು ಡಿ,23–**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ ಮತ್ತು ಶುಲ್ಕ ವಿನಾಯಿತಿ ಯೋಜನೆಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು 2026ರ ಜನವರಿ 31ರವರೆಗೆ ವಿಸ್ತರಣೆ ಮಾಡಲಾಗಿದೆ.

ಪಿ.ಯು.ಸಿ ಮತ್ತು ಸಾಮಾನ್ಯ ಪದವಿ ಕೋರ್ಸುಗಳನ್ನು ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025–26 ನೇ ಸಾಲಿಗೆ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು 31.01.2026 ರವರೆಗೆ ಪೋಷಕರು/ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕೆ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದ್ದು, ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ: http://ssp.postmatric.karnataka.gov.in/ ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಬೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ: http://bcwd.karnataka.gov.in ಇಲಾಖೆ ಸಹಾಯವಾಣಿ ದೂರವಾಣಿ ಸಂಖ್ಯೆ: 8050770004 ಅಥವಾ ಇಮೇಲ್: bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ–ಮೇಲ್: postmatrichelp@karnataka.gov.in ದೂರವಾಣಿ ಸಂಖ್ಯೆ: 1902ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದೇಶದಲ್ಲಿ ಸ್ವದೇಶ ಟೀಕಿಸಿದ ರಾಗಾ ಭಾರತದಲ್ಲಿ ಪ್ರಜಾಪ್ರಭುತ್ವ ಆತಂಕದಲ್ಲಿದೆ: ರಾಹುಲ್ ಹೇಳಿಕೆ

**ಬರ್ಲಿನ್,ಡಿ.23–** ಭಾರತದ ಪ್ರಜಾಪ್ರಭುತ್ವವು ದಾಳಿಗೆ ಒಳಗಾಗಿದ್ದು ಆತಂಕದಲ್ಲಿದೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿದೇಶದಲ್ಲಿ ಮತ್ತೆ ಟೀಕಿಸುವ ಮೂಲಕ ದೇಶದ ಮರ್ಯಾದೆಯನ್ನು ತೆಗೆದಿದ್ದಾರೆ.

ಕೇಂದ್ರ ಚುನಾವಣಾ ಆಯೋಗ ದುರುಪಯೋಗ ಪಡಿಸಿಕೊಳ್ಳಲಾಗುತ್ತಿರುವ ಬಿಜೆಪಿ ವಿರುದ್ಧ ಸಂಘಟಿತ ಹೋರಾಟ ಅಗತ್ಯವಿದೆ. ಇಲ್ಲದಿದ್ದರೆ ದೇಶದ ಸಾಂವಿಧಾನಿಕ ಸಂಸ್ಥೆಗಳು ಬಿಜೆಪಿ ಪಕ್ಷದ ಭಾಗವನ್ನಾಗಿ ಮಾಡಿಕೊಂಡು ಬಿಡುತ್ತಾರೆ ಎಂದು ಗುಡುಗಿದ್ದಾರೆ.

ಜರ್ಮನಿಯ ಬರ್ಲಿನ್‌ನ ಹರ್ಟೀ ಶಾಲೆಯಲ್ಲಿ ನಡೆದ ಸಂವಾದದಲ್ಲಿ ಮಾತನಾಡಿದ ಅವರು, ಬಿಜೆಪಿ ನೇತೃತ್ವದ ಸರ್ಕಾರ ಜಾರಿ ನಿರ್ದೇಶನಾಲಯ ಮತ್ತು ಕೇಂದ್ರೀಯ ತನಿಖಾ ದಳ, ಆದಾಯ ತೆರಿಗೆ ಇಲಾಖೆಯನ್ನು ತಮ್ಮ ತಾಳಕ್ಕೆ ತಕ್ಕಂತೆ ಬಳಸಿಕೊಳ್ಳುವ ಮೂಲಕ ವಿರೋಧ ಪಕ್ಷಗಳನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಭಾರತದಲ್ಲಿ ಸಾಂವಿಧಾನಿಕ ಸಂಸ್ಥೆಗಳಾದ ಚುನಾವಣಾ ಆಯೋಗ, ಜಾರಿ ನಿರ್ದೇಶನಾಲಯ, ಕೇಂದ್ರೀಯ ತನಿಖಾ ಸಂಸ್ಥೆ ಸೇರಿದಂತೆ ಇನ್ನಿತರೆ ಸಂಸ್ಥೆಗಳನ್ನು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ದುರುಪಯೋಗ ಪಡಿಸಿಕೊಳ್ಳುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ದೇಶದ ಸಾಂಸ್ಥಿಕ ಸಂಸ್ಥೆಗಳನ್ನು




ವಿರೋಧ ಪಕ್ಷಗಳನ್ನು ಹತ್ತಿಕ್ಕಲು "ಆಯುಧ"ದ ರೀತಿ ಬಳಸಿಕೊಳ್ಳಲಾಗುತ್ತಿದೆ ಇದು ಹೆಚ್ಚು ದಿನ ನಡೆಯುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ಆಡಳಿತ ಪಕ್ಷದೊಂದಿಗೆ ಹೊಂದಿಕೊಂಡಿರುವವರನ್ನು ಉಳಿಸಿಕೊಂಡು ರಾಜಕೀಯ ವಿರೋಧಿಗಳನ್ನು ಗುರಿಯಾಗಿಸಲು ಜಾರಿ ನಿರ್ದೇಶನಾಲಯ ಮತ್ತು ಕೇಂದ್ರೀಯ ತನಿಖಾ ದಳವನ್ನು ದಾಳಿ ಮಾಡಲು ಬಿಜೆಪಿ ಬಳಸುತ್ತಿದೆ ಎಂದು ದೂರಿದ್ದಾರೆ.

ದೇಶದ ಸಾಂಸ್ಥಿಕ ಸಂಸ್ಥೆಗಳನ್ನು ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಡುತ್ತಿಲ್ಲ, ತಮ್ಮ ಕಪಿಮುಷ್ಠಿಯಲ್ಲಿಟ್ಟುಕೊಂಡು ಚೌಕಟ್ಟಿನ ಮೇಲೆ ಪೂರ್ಣ ಪ್ರಮಾಣದ ದಾಳಿ ನಡೆಯುತ್ತಿದೆ" ಎಂದು ಅವರು ತರಾಟೆಗೆ ತೆಗೆದುಕೊಂಡಿದ್ದಾರೆ.

ಗುಪ್ತಚರ ಸಂಸ್ಥೆಗಳು, ಇಡಿ ಮತ್ತು ಸಿಬಿಐ ಬಿಜೆಪಿಯ ಆಯುಧಗಳಾಗಿವೆ. ಬಿಜೆಪಿಯಲ್ಲಿರುವ ಮಂದಿಯ ವಿರುದ್ಧ ಯಾವುದೇ ಪ್ರಕರಣ ದಾಖಲಿಸಿಲ್ಲ. ಇಡಿ, ಸಿಬಿಐ ಯಾವುದೇ ದಾಳಿ ಮಾಡುವುದಿಲ್ಲ ಬಿಜೆಪಿ ವಿರುದ್ಧ ಯಾವುದೇ ಪ್ರಕರಣಗಳನ್ನು ಹೊಂದಿಲ್ಲ ಮತ್ತು ಹೆಚ್ಚಿನ ರಾಜಕೀಯ ಪ್ರಕರಣಗಳು ಅವರನ್ನು ವಿರೋಧಿಸುವ ಜನರ ವಿರುದ್ಧವಾಗಿವೆ" ಎಂದು ತಿಳಿಸಿದ್ದಾರೆ.

ದೇಶದ ಯಾವುದೇ ಉದ್ಯಮಿ ಕಾಂಗ್ರೆಸ್ ಅನ್ನು ಬೆಂಬಲಿಸಿದರೆ, ಅವರಿಗೆ ಬೆದರಿಕೆ ಹಾಕಲಾಗುತ್ತದೆ. ಸಾಂಸ್ಥಿಕ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಳ್ಳಲಾಗುತ್ತಿದೆ. ಕಾಂಗ್ರೆಸ್ ಸಾಂಸ್ಥಿಕ ಚೌಕಟ್ಟನ್ನು ನಿರ್ಮಿಸಲು ಸಹಾಯ ಮಾಡಿತು ಮತ್ತು ಪಕ್ಷವು ಅದನ್ನು ಎಂದಿಗೂ "ನಮ್ಮ ಸ್ವಂತ ಸಂಸ್ಥೆ" ಎಂದು ನೋಡಲಿಲ್ಲ ಎಂದಿದ್ದಾರೆ.

"ಆದರೆ ಬಿಜೆಪಿ ಅದನ್ನು ಈ ರೀತಿ ನೋಡುವುದಿಲ್ಲ. ಅವರು ಸಾಂಸ್ಥಿಕ ಸಂಸ್ಥೆಗಳನ್ನ ತಮಗೆ ಸೇರಿದ ಆಸ್ತಿ ಎನ್ನುವಂತೆ ನೋಡುತ್ತಿದ್ದು ವಿರೋಧ ಪಕ್ಷಗಳನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದಿದ್ದಾರೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಪ್ರತಿ ವರ್ಷವೂ ವಿದೇಶ ಪ್ರವಾಸಕ್ಕೆ ಹೋದಾಗ ಭಾರತದ ಬಗ್ಗೆ ಒಂದಿಲ್ಲೊಂದು ಅವಹೇಳನಕಾರಿ ಹೇಳಿಕೆಯನ್ನು ನೀಡುತ್ತಲೇ ಇರುತ್ತಾರೆ. ರಾಹುಲ್ ಮತ್ತು ಕಾಂಗ್ರೆಸ್ ಭಾರತೀಯ ಪ್ರಜಾಪ್ರಭುತ್ವದಲ್ಲಿ ಅವ್ಯವಸ್ಥೆ ಮತ್ತು ಅಶಾಂತಿಯನ್ನು ಬಯಸುತ್ತಿವೆ ಎಂದು ಬಿಜೆಪಿ ಟೀಕಿಸಿದೆ.

ಈ ಬಗ್ಗೆ ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ ರಾಹುಲ್‌ಗಾಂಧಿ ಮತ್ತು ಜಾರ್ಜ್ ಸೋರಸ್ ಭಾರತೀಯ ಪ್ರಜಾಪ್ರಭುತ್ವದಲ್ಲಿ ಅವ್ಯವಸ್ಥೆ ಉಂಟು ಮಾಡಲು ಭಾರತ ವಿರೋಧಿ ಶಕ್ತಿಗಳನ್ನು ಒಗ್ಗೂಡಿಸಲು ವಿದೇಶಕ್ಕೆ ಹೋಗುತ್ತಾರೆ ಎಂದು ಟೀಕಿಸಿದ್ದಾರೆ.

ಭಾರತದಲ್ಲಿ ಪ್ರಜಾಪ್ರಭುತ್ವದ ಮೇಲೆ ದಾಳಿ ನಡೆಯುತ್ತಿದೆ ಎಂದು ವಿಪಕ್ಷ ನಾಯಕ ರಾಹುಲ್‌ಗಾಂಧಿ ಟೀಕೆಗೆ ತಿರುಗೇಟು ನೀಡಿರುವ ಅವರು, ಕಾಂಗ್ರೆಸ್ ಭಾರತೀಯ ಪ್ರಜಾಪ್ರಭುತ್ವವನ್ನು ದ್ವೇಷಿಸುತ್ತದೆ. ಕಾಂಗ್ರೆಸ್ ಭಾರತದ ಪ್ರಗತಿಯನ್ನು ದ್ವೇಷಿಸುತ್ತದೆ. ರಾಹುಲ್‌ಗಾಂಧಿಯವರ ಕಾಂಗ್ರೆಸ್ ಅರಾಜಕತೆಯನ್ನು ಬಯಸುತ್ತದೆ ಎಂದು ಟ್ವೀಟ್ ಮಾಡಿದ್ದಾರೆ.

**ಶೋಭಕರಂದ್ಲಾಜೆ ಟೀಕೆ–**ರಾಹುಲ್‌ಗಾಂಧಿಯವರ ಹೇಳಿಕೆಗೆ ಆಕ್ರೋಶ ಹೊರ ಹಾಕಿರುವ ಕೇಂದ್ರ ಸಚಿವೆ ಶೋಭ ಕರಂದ್ಲಾಜೆ ಅವರು ರಾಹುಲ್‌ಗಾಂಧಿ ದೇಶದ ವಿರುದ್ಧ ಮಾತನಾಡಲು ವಿದೇಶಕ್ಕೆ ಹೋಗುತ್ತಾರೆ ಎಂದು ಹರಿಹಾಯ್ದಿದ್ದಾರೆ.

ರಾಹುಲ್‌ಗಾಂಧಿ ವಿರೋಧ ಪಕ್ಷದ ನಾಯಕರಲ್ಲ. ಬದಲಾಗಿ ವಿದೇಶಕ್ಕೆ ಹೋಗಿ ರಾಷ್ಟ್ರದ ವಿರುದ್ಧ ಮಾತನಾಡುವ ಭಾರತ ವಿರೋಧಿ ನಾಯಕ. ಹೀಗೆ ಮಾಡುವುದರಿಂದ ಅವರು ಏನನ್ನು ಸಾಧಿಸುತ್ತಾರೆ ಎಂದು ಪ್ರಶ್ನಿಸಿದ್ದಾರೆ.

ಕರ್ನಾಟಕದಲ್ಲಿ ಅಭಿವೃದ್ಧಿಯ ಬಗ್ಗೆ ಮಾತಿಲ್ಲ. ಯಾರು ಮುಖ್ಯಮಂತ್ರಿಯಾಗಿ ಉಳಿಯುತ್ತಾರೆ ಎಂಬ ಬಗ್ಗೆ ಮಾತ್ರ ಚರ್ಚೆ ನಡೆಯುತ್ತಿದೆ ಎಂದು ಅವರು ಟೀಕಿಸಿದ್ದಾರೆ.

# ಕ್ರೀಡೆ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುವಂತಹದ್ದಾಗಿದೆ:ಅಸ್ಕಿ



**ತಾಳಿಕೋಟೆ:ಡಿ.23:** ಕ್ರೀಡೆ ಎಂಬುದು ಮನುಷ್ಯನ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುವಂತಹದ್ದಾಗಿದೆ ಅಲ್ಲದೇ ವಿದ್ಯಾರ್ಥಿಗಳಲ್ಲಿ ಓದಿನ ಜ್ಞಾಪಕ ಶಕ್ತಿಯನ್ನು ಹೆಚ್ಚಿಸುವಂತಹದ್ದಾಗಿದೆ ಎಂದು ಅಸ್ಕಿ ಫೌಂಡೇಶನ್ ಅಧ್ಯಕ್ಷ ಸಿ.ಬಿ.ಅಸ್ಕಿ ಅವರು ಹೇಳಿದರು.

ರವಿವಾರರಂದು ನಗರದ ಶ್ರೀ ಖಾಸ್ಗತೇಶ್ವರ ಪಧವಿ ಪೂರ್ವ ಕಾಲೇಜ್ ಆವರಣದಲ್ಲಿ ತಾಳಿಕೋಟಿ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ತಾಳಿಕೋಟಿ ವ್ಹಾಲಿಬಾಲ್ ಪ್ರೀಯರ್ ಲೀಗ್ ಸೀಜನ್–2ನಲ್ಲಿ ಪ್ರಥಮ ಸ್ಥಾನದಲ್ಲಿ ವಿಜೇತರಾದ ಯುಥ್ ಸ್ಪೋರ್ಟ್ಸ್ ಕ್ಲಬ್‌ನ ತಂಡಕ್ಕೆ ಅಸ್ಕಿ ಪೌಂಡೇಶನ್ ವತಿಯಿಂದ 50 ಸಾವಿರ ರೂ. ನಗಧು ಹಾಗೂ ಪ್ರಥಮ ಭಹುಮಾನವನ್ನು ವಿತರಿಸಿ ಮಾತನಾಡುತ್ತಿದ್ದ ಅವರು ಆಟಗಳನ್ನು ಆಡುವಾಗ ಸೋಲು–ಗೆಲವು ಸಾಮಾನ್ಯವಾಗಿದೆ ಸೋಲು ಎಂಬುದು ಮುಂದೊಂದು ದಿನ ಗೆಲುವಿನ ಸೋಪಾನವಾಗಲಿದೆ ಎರಡನ್ನು ಸಮಾನವಾಗಿ ಸ್ವಿಕರಿಸಿ ಕ್ರೀಡಾ ಮನೋಭಾವನೆಯನ್ನು ಹೆಚ್ಚಿಸಬೇಕೆಂದ ಅವರು ಈ ವ್ಹಾಲಿಬಾಲ್ ಕ್ರೀಡಾಕೂಟಕ್ಕೆ ಮುಂದಿನ ಭಾರಿ ಅಸ್ಕಿ ಪೌಂಡೇಶನ್ ವತಿಯಿಂದ 1 ಲಕ್ಷ ರೂ. ಪ್ರಥಮ ಭಹುಮಾನವನ್ನು ಘೋಷಿಸಿದ ಅವರು ಕ್ರೀಡಾ ಮನೋಭಾವನೆಯನ್ನು ಹೆಚ್ಚಿಸುವದಕ್ಕಾಗಿ ಅಸ್ಕಿ ಪೌಂಡೇಶನ್‌ವು ಸದಾಕಾಲ ನಿಮ್ಮಜೊತೆಗೆ ನಿಲ್ಲಲಿದೆ ಈ ಸಿಜನ್–2 ಮುಂದೆ ನೂರಾರು ವರ್ಷಗಳವರೆಗೆ ನಡೆಯಲಿ ಎಂದು ಆಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಳಿಕೋಟಿ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ ರವಿ ಕಟ್ಟಿಮನಿ ಅವರು ವಹಿಸಿದ್ದರು. ಇದೇ ಸಮಯದಲ್ಲಿ ಪ್ರಾಯೋಜಕತ್ವದವರ ವತಿಯಿಂದ ದ್ವಿತೀಯ, ತೃತೀಯ, ಭಹುಮಾನವನ್ನು ವಿತರಿಸಲಾಯಿತು.


ವೇದಿಕೆ ಮೇಲೆ ಗಣ್ಯರಾದ ಕಾಶಿನಾಥ ಮುರಾಳ, ದತ್ತು ಹೆಬಸೂರ, ಸಂತೋಷ ಮುರಾಳ, ಮಾನಸಿಂಗ್ ಕೊಕಟನೂರ, ಯಮನಪ್ಪ ಮಸರಕಲ್ಲ, ಮೈಹಿಬೂಬ ಕೇಂಭಾವಿ, ಲಂಕೇಶ ಪಾಟೀಲ, ದೈಹಿಕ ಶಿಕ್ಷಕ ಶಾಂತಗೌಡ ಅಸ್ಕಿ, ಮಲ್ಲು ಢವಳಗಿ, ವಿಕ್ರಮ ಅಗರವಾಲಾ, ಸಿದ್ದನಗೌಡ ಬಿರಾದಾರ, ತಾಳಿಕೋಟಿ ಸ್ಪೋರ್ಟ್ಸ್ ಕ್ಲಬ್‌ನ ಪದಾಧಿಕಾರಿಗಳು, ವ್ಹಾಲಿಬಾಲ್ ತಂಡಗಳ ಮಾಲಿಕರುಗಳಾದ ಪರಶುರಾಮ ಕಟ್ಟಿಮನಿ, ನಿರಂಜನಶಾ ಮಕಾಂದಾರ, ಸಂಜೀವ ಹಜೇರಿ, ರಾಜು ಪಾಟೀಲ, ಸಿದ್ದಾರ್ಥ ಕತ್ತಿ, ಇಲಿಯಾಸ ಜಮಖಂಡಿ, ಫಯಾಜ್ ಉತ್ನಾಳ, ಮೊದಲಾದವರು ಉಪಸ್ಥಿತರಿದ್ದರು.

ಸಂಜೀವ ಹಜೇರಿ ಸ್ವಾಗತಿಸಿದರು. ಎಸ್.ಕೆ.ಬಾಲಕೀಯರ ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಎ.ಬಿ.ಇರಾಜ್ ನಿರೂಪಿಸಿದರು. ರಾಘವೇಂದ್ರ ಮಾನೆ ವಂದಿಸಿದರು.

ಕ್ರೀಡೆಯಲ್ಲಿ ಸೋಲು–ಗೆಲವು ಸಮಾನವಾಗಿ ಸ್ವಿಕರಿಸಬೇಕು ಗೆದ್ದೆ ಎಂದು ಹಿಗ್ಗುವದು ಬೇಡಾ ಸೋತೆವು ಎಂದು ಕುಗ್ಗುವದು ಬೇಡಾ ಯಾವುದೇ ತಗಾದೆ ಇಲ್ಲದೇ ನಿರ್ಣಾಯಕರ ನಿರ್ಣಯಕ್ಕೆ ಬದ್ದರಾಗಿ ಕ್ರೀಡಾಮನೋಭಾವನೆಯೊಂದಿಗೆ ವ್ಹಾಲಿಬಾಲ್ ಕ್ರೀಡಾಕೂಟ ಯಶಸ್ವಿಗೊಂಡಿರುವದು ಸಂತಸ ತಂದಿದೆ. ಸಿ.ಬಿ.ಅಸ್ಕಿ(ಅಸ್ಕಿ ಪೌಂಡೇಶನ್ ಅಧ್ಯಕ್ಷ)

# ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪಂದ್ಯ ಆಯೋಜನೆಗೆ ನಿರಾಕರಣೆ

**ಬೆಂಗಳೂರು, ಡಿ.23:** ಡಿಸೆಂಬರ್ 24ರಿಂದ ನಗರದ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ಪ್ರತಿಷ್ಠಿತ ದೇಶೀಯ ಕ್ರಿಕೆಟ್ ಟೂರ್ನಿ ವಿಜಯ್ ಹಜಾರೆ ಟ್ರೋಫಿಗೆ ಅನುಮತಿ ನೀಡಲು ನಗರ ಪೊಲೀಸರು ನಿರಾಕರಿಸಿದ್ದಾರೆ. ಹೀಗಾಗಿ ರಾಜ್ಯ ಕರ್ನಾಟಕ ಕ್ರಿಕೆಟ್ ಸಂಸ್ಥೆಗೆ ದೊಡ್ಡ ಹಿನ್ನಡೆಯಾಗಿದೆ.



ಕರ್ನಾಟಕ ವಿರುದ್ಧ ಸೆಣಸಲಿರುವ ದೆಹಲಿ ತಂಡದ ಪರ ಆಡಲು ಸ್ಟಾರ್ ಆಟಗಾರ ವಿರಾಟ್ ಕೊಹ್ಲಿ ಸೋಮವಾರ ರಾತ್ರಿ ಬೆಂಗಳೂರಿಗೆ ಆಗಮಿಸಿದ್ದಾರೆ. ಆದರೆ ಚಿನ್ನಸ್ವಾಮಿಯಲ್ಲಿ ಪಂದ್ಯ ಆಯೋಜನೆಗೆ ನಿರಾಕರಿಸಲಾಗಿದೆ. ಹೀಗಾಗಿ ಕೊಹ್ಲಿಯನ್ನು ಕಣ್ತುಂಬಿಸಿಕೊಳ್ಳುವ ಸಾವಿರಾರು ಅಭಿಮಾನಿಗಳಿಗೆ ನಿರಾಸೆ ಎದುರಾಗಿದೆ.ಪಂದ್ಯ ಆಯೋಜನೆ ಕುರಿತು ಪ್ರತಿಕ್ರಿಯಿಸಿರುವ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್, ಸಿಂಗ್ , ಭದ್ರತಾ ಕಾರಣಗಳಿಗಾಗಿ ಚಿನ್ನಸ್ವಾಮಿಯಲ್ಲಿ ಸದ್ಯ ಪಂದ್ಯ ಆಯೋಜನೆಗೆ ಅವಕಾಶ ನೀಡುವುದಿಲ್ಲ ಎಂದು ಎಂದು ಮಂಗಳವಾರ ಹೇಳಿದ್ದಾರೆ.2027ರ ಏಕದಿನ ವಿಶ್ವಕಪ್ ಮೇಲೆ ಕಣ್ಣಿಟ್ಟಿರುವ ಕೊಹ್ಲಿ ಅವರನ್ನು ವಿಜಯ್ ಹಜಾರೆ ಟ್ರೋಫಿಯಲ್ಲಿ ಆಡುವಂತೆ ಬಿಸಿಸಿಐ ಸೂಚಿಸಿದ ಹಿನ್ನೆಲೆಯಲ್ಲಿ 2010ರ ನಂತರ ಇದೇ ಮೊದಲ ಬಾರಿ ಕೊಹ್ಲಿ ವಿಜಯ್ ಹಜಾರೆ ಟ್ರೋಫಿಯಲ್ಲಿ ಆಡಲು ನಿರ್ಧರಿಸಿದ್ದಾರೆ. ಡಿ ಗುಂಪಿನಲ್ಲಿರುವ ಕರ್ನಾಟಕ, ದೆಹಲಿ ಮತ್ತು ಆಂಧ್ರಪ್ರದೇಶ ತಂಡಗಳ ಪಂದ್ಯಗಳಿಗೆ ಬೆಂಗಳೂರು ಆತಿಥ್ಯವಾಗಿದೆ. ಸದ್ಯ ಎಲ್ಲಾ ಪಂದ್ಯಗಳು ಆಲೂರಿಗೆ ಸ್ಥಳಾಂತರವಾಗುವ ಸಾಧ್ಯತೆ ಇದೆ.

# ಗಣರಾಜ್ಯೋತ್ಸವ ಆಚರಣೆ: ಸಿದ್ಧತೆ ಕೈಗೊಳ್ಳಲು ಅಧಿಕಾರಿಗಳಿಗೆ ಡಿಸಿ ಸೂಚನೆ



**ಬೆಂಗಳೂರು, ಡಿ. 23 :** ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಜನವರಿ 26 2026 ರಂದು ನಡೆಯುವ ರಾಜ್ಯ ಮಟ್ಟದ ಗಣರಾಜ್ಯೋತ್ಸವ ದಿನಾಚರಣೆಗೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಜಗದೀಶ್.ಜಿ ರವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗಣರಾಜ್ಯೋತ್ಸವ ಆಚರಣೆ ಅಂಗವಾಗಿ ಕರೆದಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು ಅವರು, ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ನಡೆಯುವ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪರೇಡ್ ಮೈದಾನವನ್ನು ಸಮತಟ್ಟು ಮಾಡುವ ವ್ಯವಸ್ಥೆಯನ್ನು ಮತ್ತು ಮೈದಾನವನ್ನು ಅಚ್ಚುಕಟ್ಟಾಗಿ ಸಿದ್ಧಗೊಳಿಸುವಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಕೇಂದ್ರ ವಲಯ) ಹಾಗೂ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಿಗೆ ತಿಳಿಸಿದರು.

ಬೆಂಗಳೂರಿನಲ್ಲಿ ನಡೆಯುವ ಗಣರಾಜ್ಯೋತ್ಸವ ದಿನಾಚರಣೆಯು ರಾಜ್ಯಮಟ್ಟದ ಕಾರ್ಯಕ್ರಮವಾಗಿದ್ದು, ಗಣ್ಯಾತಿಗಣ್ಯರಲ್ಲದೇ ಸಾವಿರಾರು ಸಂಖ್ಯೆಯಲ್ಲಿ ಶಾಲಾ ಮಕ್ಕಳು, ಸಾರ್ವಜನಿಕರು ಮತ್ತು ಹಲವಾರು ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿರುವ ಹಿನ್ನಲೆಯಲ್ಲಿ ಯಾವುದೇ ರೀತಿಯ ವಿಧ್ವಂಸಕ ಕೃತ್ಯಗಳು ಅಥವಾ ಅವಘಡಗಳು ಸಂಭವಿಸದಂತೆ ಮುನ್ನೆಚರಿಕೆ ವಹಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮವನ್ನು ತೆಗೆದುಕೊಳ್ಳುವಂತೆ ಹಾಗೂ ಭದ್ರತಾ ವ್ಯವಸ್ಥೆಗಾಗಿ ಗೇಟ್ ಬಳಿ ಬ್ಯಾಗೇಜ್ ಸ್ಕ್ಯಾನರ್‌ಗಳನ್ನು ಹಾಗೂ ಸಿಸಿ ಕ್ಯಾಮರಗಳನ್ನು ಅಳವಡಿಸುವಂತೆ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಕಾರ್ಯಕ್ರಮದ ತಾಲೀಮು ಹಾಗೂ ಕಾರ್ಯಕ್ರಮ ನಡೆಯುವ ದಿನದಂದು ಪರೇಡ್ ಮೈದಾನದಲ್ಲಿ ಅಗತ್ಯ ತುರ್ತು ಔಷಧಿಗಳು ಹಾಗೂ ಆಂಬ್ಯುಲೆನ್ಸ್‌ಗಳ ವ್ಯವಸ್ಥೆ ಮಾಡುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ತಿಳಿಸಿದರು.

ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪರೇಡ್ ಮೈದಾನದ ಸುತ್ತ ಮುತ್ತ ವಾಹನ ಸಂಚಾರ ನಿಯಂತ್ರಣ ಹಾಗೂ ಸೂಕ್ತ ಭದ್ರತಾ ವ್ಯವಸ್ಥೆ ಮಾಡುವಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತರು ಮತ್ತು ಉಪ ಪೊಲೀಸ್ ಆಯುಕ್ತರಿಗೆ (ಸಂಚಾರ) ತಿಳಿಸಿದರು. ಮೈದಾನದಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಅಗ್ನಿಶಾಮಕ ವಾಹನಗಳ ಹಾಗೂ ಅಗತ್ಯ ಸಿಬ್ಬಂದಿಯೊಂದಿಗೆ ಸಿದ್ಧವಿರುವಂತೆ ವ್ಯವಸ್ಥೆ ಮಾಡಿಕೊಳ್ಳಬೇಕೆಂದು ಅಗ್ನಿಶಾಮಕ ದಳದ ಅಧಿಕಾರಿಗಳಿಗೆ ಸೂಚಿಸಿದರು.

**ಸಾರ್ವಜನಿಕರಿಗೆ E-Pass ವ್ಯವಸ್ಥೆ:** ಫೀಲ್ಡ್ ಮಾರ್ಷಲ್ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಜನವರಿ 26 ರಂದು ನಡೆಯಲಿರುವ ರಾಜ್ಯ ಮಟ್ಟದ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮವನ್ನು ವೀಕ್ಷಿಸಿಸಲು ಸಾರ್ವಜನಿಕರಿಗೆ ಇ–ಕಚೆ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ

# ಡಿ.24ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

**ರಾಯಚೂರು ಡಿ,23–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ, ನಾಗರಿಕ ಸರಬರಾಜು ಹಾಘೂ ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2025ರ ಕಾರ್ಯಕ್ರಮವನ್ನು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಡಿಸೆಂಬರ್ 24ರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಕೆ.ವಿ.ಸುರೇಂದ್ರ ಕುಮಾರ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಪ್ರಭುದೇವ್, ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ, ವಕೀಲರಾದ ಗೌರೀಶ್ ಸೇರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದು ಆಹಾರ, ನಾಗರಿಕ ಸರಬರಾಜು ಹಾಘೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ : ಮೊದಲ ಹಂತದಲ್ಲಿ 32 ಲಕ್ಷ ಗುರುತು ಇಲ್ಲದ ಮತದಾರರು ಪತ್ತೆ



**ಕೋಲ್ಕತ್ತಾ, ಡಿ. 23–** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅಡಿಯಲ್ಲಿ ಮೊದಲ ಹಂತದ ವಿಚಾರಣೆಯಲ್ಲಿ ಸುಮಾರು 32 ಲಕ್ಷ ಗುರುತಿಸಲಾಗದ ಮತದಾರರನ್ನು ಪತ್ತೆ ಹೆಚ್ಚಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

2002 ರ ಮತದಾರರ ಪಟ್ಟಿಯಲ್ಲಿರುವ ಕುಟುಂಬ ಸದಸ್ಯರ ಹೆಸರುಗಳೊಂದಿಗೆ ಮತದಾರರು ತಮ್ಮ ಹೆಸರುಗಳನ್ನು ಲಿಂಕ್ ಮಾಡಲು ಸಾಧ್ಯವಾಗದ ಈ ವರ್ಗದ ವಿಚಾರಣೆಗಳು ಡಿಸೆಂಬರ್ 27 ರಿಂದ ಪ್ರಾರಂಭವಾಗಲಿವೆ ಎಂದು ಅವರು ಹೇಳಿದರು.

ಇಂದಿನಿಂದ ಸುಮಾರು 10 ಲಕ್ಷ ಅಂತಹ ಮತದಾರರಿಗೆ ನಾವು ನೋಟಿಸ್ ಕಳುಹಿಸಲು ಪ್ರಾರಂಭಿಸಿದ್ದೇವೆ, ಆದರೆ ಇನ್ನೂ 22 ಲಕ್ಷ ಮತದಾರರಿಗೆ ಅದೇ ರೀತಿ ನೀಡಲಾಗುವುದು ಎಂದು ಪಶ್ಚಿಮ ಬಂಗಾಳದ ಮುಖ್ಯ ಚುನಾವಣಾಧಿಕಾರಿ ಕಚೇರಿಯ ಅಧಿಕಾರಿ ಪಿಟಿಐಗೆ ತಿಳಿಸಿದ್ದಾರೆ.

ಗಣತಿ ಹಂತದಲ್ಲಿ, ರಾಜ್ಯಾದ್ಯಂತ ಒಟ್ಟು 31,68,424 ಮ್ಯಾಪ್ ಮಾಡದ ಮತದಾರರನ್ನು ಗುರುತಿಸಲಾಗಿದೆ ಎಂದು ಅವರು ಹೇಳಿದರು.ಜಿಲ್ಲಾ ಮ್ಯಾಜಿಸ್ಟ್ರೇಟ್ ಕಚೇರಿಗಳು, ಉಪ–ವಿಭಾಗೀಯ ಕಚೇರಿಗಳು, ವಿವಿಧ ಸರ್ಕಾರಿ ಇಲಾಖೆಗಳು ಹಾಗೂ ಶಾಲೆಗಳು ಮತ್ತು ಕಾಲೇಜುಗಳಲ್ಲಿ ಪ್ರಕ್ರಿಯೆಗಳನ್ನು ನಡೆಸಲಾಗುವುದು ಎಂದು ಅವರು ಹೇಳಿದರು.

ತಾರ್ಕಿಕ ವ್ಯತ್ಯಾಸಗಳನ್ನು ಹೊಂದಿರುವ ಮತದಾರರನ್ನು ಮುಂದಿನ ಹಂತದಲ್ಲಿ ಪರಿಶೀಲಿಸಲಾಗುವುದು, ಇದಕ್ಕಾಗಿ ಚುನಾವಣಾ ಆಯೋಗದಿಂದ ಮಾರ್ಗಸೂಚಿಗಳನ್ನು ಕೋರಲಾಗಿದೆ ಎಂದು ಮತ್ತೊಬ್ಬ ಅಧಿಕಾರಿ ತಿಳಿಸಿದ್ದಾರೆ.ಪ್ರತಿ ವಿಚಾರಣೆಯನ್ನು ಸೂಕ್ಷ್ಮ ವೀಕ್ಷಕರ ಮೇಲ್ವಿಚಾರಣೆಯಲ್ಲಿ ನಡೆಸಲಾಗುವುದು ಎಂದು ಅವರು ಹೇಳಿದರು.ಡಿಸೆಂಬರ್ 24 ರಂದು ಕೋಲ್ಕತ್ತಾದಲ್ಲಿ 4,000 ಸೂಕ್ಷ್ಮ ವೀಕ್ಷಕರಿಗೆ ಎರಡು ಹಂತಗಳಲ್ಲಿ ತರಬೇತಿ ನೀಡಲಾಗುವುದು ಎಂದು ಅವರು ಹೇಳಿದರು, ಎಲ್ಲಾ ಸೂಕ್ಷ್ಮ ವೀಕ್ಷಕರು ರಾಜ್ಯದ ಅಧಿಕಾರಿಗಳಾಗಿದ್ದಾರೆ ಎಂದು ಅವರು ಹೇಳಿದರು.

ಟಿಎಂಸಿ ಮುಖ್ಯಸ್ಥೆ ಮತ್ತು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಸೂಕ್ಷ್ಮ ವೀಕ್ಷಕರಿಗೆ ಸ್ಥಳೀಯ ಬಂಗಾಳಿ ಭಾಷೆಯ ಜ್ಞಾನದ ಕೊರತೆ ಇದೆ ಎಂದು ಆರೋಪಿಸಿದ್ದಾರೆ.ಏತನ್ಮಧ್ಯೆ, ಚುನಾವಣಾ ಆಯೋಗದ ನಿಯೋಗವು ಮತದಾರರ ಪಟ್ಟಿಯ ಎಸ್‌ಐಆರ್‌ನ ಪ್ರಗತಿಯನ್ನು ಪರಿಶೀಲಿಸಲು ರಾಜ್ಯಕ್ಕೆ ಭೇಟಿ ನೀಡಲಿದೆ ಎಂದು ರಾಜ್ಯ ಸಿಇಒ ಕಚೇರಿಯ ಮೂಲಗಳು ತಿಳಿಸಿವೆ.

ಆಯೋಗದ ಪ್ರಧಾನ ಕಾರ್ಯದರ್ಶಿ ಎಸ್‌ಬಿ ಜೋಶಿ ಮತ್ತು ಉಪ ಕಾರ್ಯದರ್ಶಿ ಅಭಿನವ್ ಅಗರ್ವಾಲ್ ಅವರು ಎಸ್‌ಐ ಪ್ರಕ್ರಿಯೆಯಡಿಯಲ್ಲಿ ವಿಚಾರಣೆಯ ಹಂತದ ಪ್ರಗತಿಯನ್ನು ನಿರ್ಣಯಿಸಲು ರಾಜ್ಯಕ್ಕೆ ಆಗಮಿಸಲಿದ್ದಾರೆ ಎಂದು ಅವರು ಹೇಳಿದರು.ಡಿಸೆಂಬರ್ 24 ರಂದು ಸೂಕ್ಷ್ಮ ವೀಕ್ಷಕರಿಗೆ ತರಬೇತಿ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು.

# ವಿ ಎಸ್ ಎಸ್ ಎನ್ ಅದ್ಯಕ್ಷರಾಗಿ ಚನ್ನೂರು ಚನ್ನಪ್ಪ – ಉಪಾದ್ಯಕ್ಷರಾಗಿ ನಾಗರಾಜಗೌಡ ಅವಿರೋಧ ಆಯ್ಕೆ.



ಧೈರ್ಯದ ದಾರಿ

**ಸಿರವಾರ.ಡಿ.23–**ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಕ್ಕೆ ನೂತನ ಅದ್ಯಕ್ಷರಾಗಿ ಚನ್ನಪ್ಪ ಚನ್ನೂರು, ಉಪಾದ್ಯಕ್ಷರಾಗಿ ನಾಗರಾಜಗೌಡ ಅವರು ಕೇವಲ ಒಂದೊಂದು ನಾಮಪತ್ರ ಸಲ್ಲಿಕೆ ಮಾಡಿರುವ ಕಾರಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಣೆ ಮಾಡಲಾಯಿತು. ಪಟ್ಟಣದಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಕ್ಕೆ ಒಟ್ಟು 11 ಸಾಲಗಾರರ, 1 ಸಾಲಗಾರರಲ್ಲ ಕ್ಷೇತ್ರ ಸೇರಿ ಒಟ್ಟು 12 ನಿರ್ದೇಶಕರ ಸ್ಥಾನಕ್ಕೆ ಇತ್ತಿಚೇಗೆ ಚುನಾವಣೆ ಜರುಗಿದವು. ಅದರಲಿ ಸಾಲಗಾರರಲ್ಲದ ಕ್ಷೇತ್ರಕ್ಕೆ ನಾಗರಾಜ ಗೌಡ ಅವರು ಅವಿರೋಧವಾಗಿ ಆಯ್ಕೆಯಾದರು. ಚನ್ನಪ್ಪ ಚನ್ನೂರು, ಎನ್.ಬಸ್ಸಪ್ಪ ಗೌಡ ದೇವಪುತ್ರ, ಮಹ್ಮದ ವಾಹೀದ್ ಅಡಿವೇಪ್ಪದೊಡ್ಡಮನಿ.ಗ್ಯಾನಪ್ಪ, ಆಂಜಿನೇಂಯ್ಯ,ಪಂಪಾಪತಿ ನೀಲಗಲ್, ಸಿದ್ದಮ್ಮ ಕರಿಬಸಯ್ಯಸ್ವಾಮಿ, ಶಿವರಾಜಗೌಡ,ಸಿದ್ದಮ್ಮ ಅವರು ಚಿನಾವಣೆಯಲ್ಲಿ ಸ್ವರ್ದಿಸಿ ಗೇಲುವು ಸಾದಿಸಿದ್ದರು. ಅದ್ಯಕ್ಷ – ಉಪಾದ್ಯಕ್ಷ ಆಯ್ಕೆಗೆ ಡಿ 21 ಭಾನುವಾರ ದಿನಾಂಕ ನಿಗದಿ ಮಾಡಲಾಗಿತು ಅದರನ್ವಯ ಅದ್ಯಕ್ಷ ಸ್ಥಾನಕ್ಕೆ ಚನ್ನಪ್ಪ ಚನ್ನೂರು, ಉಪಾದ್ಯಕ್ಷ ಸ್ಥಾನಕ್ಕೆ ನಾಗರಾಜಗೌಡ ಅವರು ಕೇವಲ ಒಂದೊಂದು ನಾಮಪತ್ರ ಸಲ್ಲಿಕೆ ಮಾಡಿದ ಕಾರಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಣೆ ಮಾಡಲಾಯಿತು. ಸಂಭ್ರಮಾಚರಣೆ :– ಅದ್ಯಕ್ಷರಾಗಿ ಆಯ್ಕೆಯಾದ ಚನ್ನಪ್ಪ ಚನ್ನೂರು, ಉಪಾದ್ಯಕ್ಷರಾಗಿ ಆಯ್ಕೆಯಾದ ನಾಗರಾಜಗೌಡ ಅವರಿಗೆ ಹಾರ ಶಾಲು ಹಾಕಿ ಸಿಹಿ ತಿನ್ನಿಸಿ ಪಟಾಕಿ ಸಿಡಿಸಿ ಸಂಭ್ರಮಿಸಲಾಯಿತು.

# ಲಿಂ.ಶ್ರೀ ವೀರಭದ್ರಯ್ಯ ತಾತನವರ 39 ಜಾತ್ರಾ ಮಹೋತ್ಸವ ನೂತನ ಜೀವನಕ್ಕೆ ಕಾಲಿಟ್ಟ 8 ಜೋಡಿಗಳು. ಸಾಮೂಹಿಕ ವಿವಾಹವಾಗುವವರು ಪುಣ್ಯವಂತರು – ಡಾ.ಪಂಚಾಕ್ಷರಿ ಶಿವಾಚಾರ್ಯರು.



ಧೈರ್ಯದ ದಾರಿ

**ಅರಕೇರಿ.ಡಿ.23–** ಸಾಮೂಹಿಕ ವಿವಾಹಗಳಿಂದ ಆರ್ಥಿಕ ಹೊರೆ ತಗ್ಗಿ, ಪ್ರಗತಿಗೆ ಪೂರಕವಾಗುತ್ತದೆ, ಸಾಮೂಹಿಕ ವಿವಾಹ ಎಂದರೆ ಅದು ಕೇವಲ ಬಡ ಜನರ ಮದುವೆ ಕಾರ್ಯಕ್ರಮ ಎಂದು ಭಾವಿಸುವುದು ತಪ್ಪು. ಪವಿತ್ರವಾದ ಧಾರ್ಮಿಕ ಕ್ಷೇತ್ರ, ಸಹಸ್ರಾರು ಭಕ್ತರ ಮತ್ತು ಮಠಾಧೀಶರ ಆಶೀರ್ವಾದದೊಂದಿಗೆ ಸಾಮೂಹಿಕ ವಿವಾಹ ಬಂಧನಕ್ಕೊಳಗಾಗುವ ಭಾಗ್ಯ ಜೀವನದ ಸಾರ್ಥಕತೆಯ ಕ್ಷಣವಾಗಿದೆ ಎಂದು ನೀಲೋಗಲ್ ಬೃಹನ್ಮಠದ ಷ.ಬ್ರ. ಡಾ.ಪಂಚಾಕ್ಷರಿ ಶಿವಾಚಾರ್ಯರು ನುಡಿದರು. ಸಮೀಪದ ನಾಗಡದಿನ್ನಿ ಗ್ರಾ.ಪಂ ವ್ಯಾಪ್ತಿಯ ಯರಮರಸ್ ನ ಲಿಂ.ಶ್ರೀ ವೀರಭದ್ರಯ್ಯ ತಾತನವರ 39 ನೇ ಪುಣ್ಯತಿಥಿ ಮಹೋತ್ಸವ ಹಾಗೂ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮದ ಸಾನಿದ್ಯವಹಿಸಿ ತಮ್ಮ ಆಶೀರ್ವಚನದಲ್ಲಿ ಮದುವೆ ಪ್ರತಿಯೊಬ್ಬರ ಜೀವನದ ಮಹತ್ತರ ಘಟ್ಟ. ಇದಕ್ಕಾಗಿ ಅನಗತ್ಯ ಹಣ ವ್ಯರ್ಥ ಮಾಡುವ ಅಗತ್ಯವಿಲ್ಲ. ಸಾಮೂಹಿಕ ವಿವಾಹದಲ್ಲಿಸಂಸಾರ ಜೀವನಕ್ಕೆ ಪಾದಾರ್ಪಣೆ ಆದರ್ಶ. ಇದು, ಕುಟುಂಬಕ್ಕೆ ಮಾತ್ರವಲ್ಲದೇ ದೇಶದ ಅಭಿವೃದ್ಧಿಗೂ ಸಹಕಾರಿಯಾಗುತ್ತದೆ. ಮಿತ ಸಂತಾನ, ಮಕ್ಕಳ ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಿ ಎಂದರು. ಶಿವಕುಮಾರ ಪೊ.ಪಾ. ವಟಗಲ್ ಮಾತನಾಡಿ ಕಾರ್ಯಕ್ರಮಗಳಿಂದಾಗಿ ಬಡವರಿಗೆ ಅನುಕೂಲವಾಗಲಿದೆ. ಇಂತಹ ಕಾರ್ಯಕ್ರಮಗಳು ಸಮಾಜಮುಖಿ ಕಾರ್ಯಗಳಾಗಿವೆ. ದುಂದುವೆಚ್ಚ, ಆಡಂಬರಕ್ಕೆ ಕಡಿವಾಣ ಹಾಕಲು ಸಾಧ್ಯವಾಗುತ್ತದೆ. ಹೊಸ ದಾಂಪತ್ಯಕ್ಕೆ ಕಾಲಿಟ್ಟ ವಧು–ವರರು ಪರಸ್ಪರ ಒಬ್ಬರೊನ್ನೊಬ್ಬರು ಅರಿತು ಸಹಬಾಳ್ವೆ ನಡೆಸಿದಾಗಲೇ ದಾಂಪತ್ಯ ಜೀವನಕ್ಕೆ ಉತ್ತಮ ಅರ್ಥ ಸಿಗುತ್ತದೆ.ಎಂದರು. ಬೆಳಗ್ಗೆಯಿಂದಲೇ ವಿವಿಧ ಪೂಜೆ ಕೈಂಕಾರ್ಯಗಳು ಜರುಗಿದವು. 8 ನವ ಜೊಡಿಗಳು ನೂತನ ಜೀವನಕ್ಕೆ ಕಾಲಿಟ್ಟರು. ಭಕ್ತರಿಂದ ಚರಬಸಯ್ಯ ತಾತನವರ ತುಲಾಭಾರ ನೇರವೆರಿಸಿದರು. ದೇವದುರ್ಗ ಶಾಸಕಿ ಜಿ.ಕರಿಯಮ್ಮ ನಾಯಕ ಪುತ್ರ ಕು.ಗೌರಿ ಜಿ ನಾಯಕ ಆಗಮಿಸಿ ಶ್ರೀಗಳಿಗೆ ಸನ್ಮಾನಿಸಿ ಶ್ರೀಗಳಿಂದ ಆಶೀರ್ವಾದ ಪಡೆದರು. ಈ



ಸಂದರ್ಭದಲ್ಲಿ ಜಾಗಟಗಲ್ ನ ಬೆಟ್ಟಪ್ಪತಾತ, ಮಂತ್ರಜಾತಯ್ಯ ತಾತನವರು, ವೈ.ಅಮರೇಶಪ್ಪ, ಭೀಮನಗೌಡ ನಾಗಡದಿನ್ನಿ(ವಂದನಾರ್ಪಣೆ ಮಾಡಿದರು), ಬಸವರಾಜಪ್ಪಗೌಡ,ಶರಣಬಸವ ಮಾ.ಪಾ, ಬಸವನಗೌಡ, ಸಿದ್ದನಗೌಡ,ಅಮರಪ್ಪ, ಮಹಾದೇವಪ್ಪ, ಅಜ್ಜಪ್ಪಗೌಡ,ಶರಣಬಸವ ಪೊ.ಪಾ, ಪಂಪನಗೌಡ. ನಿರುಪಣೆಯನ್ನು ಮಾಡಿದರು.

# ಪ್ರತಿಯೊಂದು ಮಗುವಿಗೆ ತಪ್ಪದೇ ಲಸಿಕೆ ಹಾಕಿಸಿ–ಜ್ಞಾನಮಿತ್ರ



ಧೈರ್ಯದ ದಾರಿ

**ಸಿರವಾರ:ಡಿ.23–**ರಾಷ್ಟ್ರೀಯ ಪಲ್ಸ್ ಪೋಲಿ ಯೊ ಲಸಿಕಾ ಕಾರ್ಯಕ್ರಮ ಇಂದಿನಿಂದ ಡಿ.21 ರಿಂದ 24 ರವರೆಗೆ ನಡೆಯಲಿದ್ದು.5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಬೇಕು ಎಂದು ಸಂಜೀವಿನಿ ಟ್ರಸ್ಟ್ ಅಧ್ಯಕ್ಷ ಸಮಾಜ ಸೇವಕ ಜ್ಞಾನಮಿತ್ರ ಅವರು ತಿಳಿಸಿದರು.

ಪಟ್ಟಣದ ವಿದ್ಯಾನಗರದಲ್ಲಿ ಸಂಜೀವಿನಿ ಟ್ರಸ್ಟ್ ಅಧ್ಯಕ್ಷ ಹಾಗೂ ಸಮಾಜ ಸೇವಕ ಜ್ಞಾನಮಿತ್ರ ಅವರು ಮಕ್ಕಳಿಗೆ ಪೋಲಿ ಯೋ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ದೇಶವನ್ನು ಪೋಲಿಯೊ ಮುಕ್ತವನ್ನಾಗಿಸ ಲು 1997ರಲ್ಲಿ ಪಲ್ಸ್ ಪೋಲಿಯೊ ಯೋಜ ನೆ ಆರಂಭಿಸಲಾಯಿತು. ಕಳೆದ 12 ವರ್ಷಗ ಳಿಂದ ದೇಶ ಪೋಲಿಯೊ ಮುಕ್ತವಾಗಿದೆ. ಆದರೆ, ಪಕ್ಕದ ಕೆಲ ದೇಶಗಳಲ್ಲಿ ಆಗಾಗ್ಗೆ ಪೋಲಿಯೊ ಪತ್ತೆಯಾಗುತ್ತಿದೆ. ಈ ಮುನ್ನೆ ಚ್ಚರಿಕೆಯಿಂದ ಇಲ್ಲೂ ಲಸಿಕೆ ಹಾಕುವುದನ್ನು ಮುಂದುವರಿಸಲಾಗಿದೆ. ಅಂಗವೈಕಲ್ಯದಂಥ ತೊಂದರೆ ತಡೆಯಲು ಪೋಲಿಯೊ ಲಸಿಕೆಯನ್ನು ಮಕ್ಕಳಿಗೆ ಹಾಕಲಾಗುತ್ತಿದೆ ಎಂದು ವಿವರಿಸಿದರು.

ಡಿ.21 ಬೆಳಿಗ್ಗೆ 8 ಗಂಟೆಯಿಂದ ಸಂಜೆ 5 ಗಂಟೆವರೆಗೆ ಪೋಲಿಯೊ ಲಸಿಕೆ ಹಾಕಲಾಗುತ್ತದೆ. ಡಿ.22, 23, 24 ರಂದು ಮೂರು ದಿನ ಪ್ರತಿ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಹಾಕಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯ ಎಂ. ಗುಂಡಪ್ಪ ಸೇರಿದಂತೆ ಅರೋಗ್ಯ ಇಲಾಖೆ ಸಿಬ್ಬಂದಿಯುವರು ಹಾಗೂ ಆಶಾಕಾರ್ಯ ಕರ್ತೆಯರು ತಾಯಂದಿರು ಮಕ್ಕಳು ಇದ್ದರು.

# ಹೆಣ್ಣುಮಕ್ಕಳು ಸ್ವಾವಲಂಬಿಯಾಗಲು ಪ್ರಯತ್ನಿಸಲಿ : ಡಾ. ವಿಶಾಲಾಕ್ಷಿ ವಿ. ಕರಡ್ಡಿ




**ಬೀದರ್:ಡಿ.23:** ಹೆಣ್ಣುಮಕ್ಕಳು ಸ್ವಾವಲಂಬಿಯಾಗಲು ಪ್ರಯತ್ನಿಸಬೇಕು ಎಂದು ಕಲಬುರಗಿಯ ಡಾ. ವಿಶಾಲಾಕ್ಷಿ ವಿ. ಕರಡ್ಡಿ ಕಿವಿಮಾತು ಹೇಳಿದರು.

ನಗರದ ಅಮಲಾಪುರ ರಸ್ತೆಯಲ್ಲಿ ಇರುವ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದಲ್ಲಿ ಭಾನುವಾರ ನಡೆದ ಶ್ರೀ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಮಹಿಳಾ ಸ್ವಸಹಾಯ ಸಂಘದ ದಶಮಾನೋತ್ಸವ ಹಾಗೂ ಜಿಲ್ಲಾ ರೆಡ್ಡಿ ಮಹಿಳಾ ಜಾಗೃತಿ ಸಮಾವೇಶದಲ್ಲಿ ಅವರು ಮಾತನಾಡಿದರು.ಹೆಣ್ಣುಮಕ್ಕಳು ಸಂಘಟಿತರಾಗಬೇಕು. ಪರಸ್ಪರರ ಬೆಳವಣಿಗೆಗೆ ಸಹಕರಿಸಬೇಕು ಎಂದು ತಿಳಿಸಿದರು.

ಉದ್ಘಾಟನೆ ನೆರವೇರಿಸಿದ ನಿವೃತ್ತ ಪ್ರಾಚಾರ್ಯ ಶಿವಶರಣಪ್ಪ ಹುಗ್ಗಿ ಪಾಟೀಲ ಅವರು ಹೇಮರೆಡ್ಡಿ ಮಲ್ಲಮ್ಮ ಅವರ ಜೀವನ ಮತ್ತು ಸಾಧನೆ ಮೇಲೆ ಬೆಳಕು ಚೆಲ್ಲಿದರು.ಡಾ. ಜ್ಯೋತಿ ರೆಡ್ಡಿ, ಡಾ. ಮಲ್ಲಪ್ಪ ಬೋತಗಿ, ಜಿಲ್ಲಾ ರೆಡ್ಡಿ ಸಮಾಜದ ಅಧ್ಯಕ್ಷ ಶಂಕರ ರೆಡ್ಡಿ, ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ರೆಡ್ಡಿ ಬ್ಯಾಂಕ್ ಅಧ್ಯಕ್ಷ ಸಂಗ್ರಾಮ ರೆಡ್ಡಿ ಹುಣಸಗೇರಿ, ಡಾ. ಆನಂದ ರೆಡ್ಡಿ ಮಾತನಾಡಿದರು. ನಗರಸಭೆ ಸದಸ್ಯ ರಾಜು ಚಿಂತಾಮಣಿ, ರೆಡ್ಡಿ ಸಮಾಜದ ಭೀಮ ರೆಡ್ಡಿ ಸಿಂಧನಕೇರಾ, ಪ್ರಶಾಂತ ಜವಳೆ, ರಾಜ ರೆಡ್ಡಿ, ಅಪ್ಪಾ ರೆಡ್ಡಿ, ರಾಮ ರೆಡ್ಡಿ, ಶರಣಪ್ಪ ತಿರ್ಲಾಪುರ ಹಾಗೂ ರೆಡ್ಡಿ ಸಮಾಜದ ಸಾಧಕರ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಸಂಘದ ಅಧ್ಯಕ್ಷೆ ಸಂಗೀತಾ ರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ಶಿಲ್ಪಾ ರೆಡ್ಡಿ ಬೋಗಲೆ ಸ್ವಾಗತಿಸಿದರು. ಉಮಾ ರೆಡ್ಡಿ, ಅನುರಾಧಾ ರೆಡ್ಡಿ ನಿರೂಪಿಸಿದರು. ಸಂಘದ ಉಪಾಧ್ಯಕ್ಷೆ ಬಬಿತಾ ರೆಡ್ಡಿ ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE